ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 17 RNI Number : KNKAN/25/A2770 19-01-2026 Monday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :17 ರಾಯಚೂರು 19-01-2026 ಸೋಮವಾರ ಪುಟ 04 ಬೆಲೆ ರೂ.2/- ಮೊ:8660146563

ಮದ್ಯದಂಗಡಿ ಲೈಸೆನ್ಸ್‌ಗೆ ಲಂಚ : ಪ್ರತಿಕ್ರಿಯೆ ನೀಡಲು ಸಿಎಂ ನಿರಾಕರಣೆ

ಮೈಸೂರು, ಜ.18-

ಮದ್ಯದಂಗಡಿಗೆ ಲೈಸೆನ್ಸ್ ನೀಡಲು ಎರಡೂವರೆ ಕೋಟಿ ರೂ. ಲಂಚ ಪಡೆದಿದ್ದಾರೆ ಎಂದು ಅಬಕಾರಿ ಸಚಿವರ ವಿರುದ್ಧ ಬಿಜೆಪಿ ಮಾಡಿರುವ ಆರೋಪಕ್ಕೆ ಸ್ಪಷ್ಟ ಉತ್ತರ ನೀಡಲು ನಿರಾಕರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಹಿಂದೆ ಶೇ.40ರಷ್ಟು ಕಮಿಷನ್ ಆರೋಪ ಮಾಡಿದ್ದು ಯಾರು? ಎಂದು ಮರು ಪ್ರಶ್ನೆ ಮಾಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಬಕಾರಿ ಇಲಾಖೆಯ ಜಿಲ್ಲಾ ಅಧೀಕ್ಷಕರನ್ನು ಲೋಕಾಯುಕ್ತ ಪೊಲೀಸರು ಲಂಚ ಪಡೆಯುವಾಗ ಬಂಧಿಸಿರುವುದಕ್ಕೆ ಪ್ರತಿಕ್ರಿಯಿಸಿದ ಅವರು, ಉಪ್ಪು ತಿಂದವರು ನೀರು ಕುಡಿಯುತ್ತಾರೆ. ನಾವು ಅಂತಹ ವಿಚಾರಗಳಲ್ಲಿ ಯಾರನ್ನೂ ಸಮರ್ಥಿಸಿಕೊಳ್ಳುವುದಿಲ್ಲ ಎಂದು ಹೇಳಿದ್ದಾರೆ.

ಹಗರಣದಲ್ಲಿ ಅಬಕಾರಿ ಸಚಿವರ ಹೆಸರು ಕೇಳಿ ಬರುತ್ತಿದೆ ಎಂದು ಬಿಜೆಪಿ ಮಾಡುತ್ತಿರುವ ಆರೋಪದ ಬಗ್ಗೆ ನನಗೆ ಗೊತ್ತಿಲ್ಲ. ಈ ಹಿಂದೆ ಬಿಜೆಪಿಯ ಸರ್ಕಾರದ ಅವಧಿಯಲ್ಲಿ ಶೇ.40ರಷ್ಟು ಕಮಿಷನ್ ಪಡೆಯಲಾಗುತ್ತಿದೆ ಎಂದು ಆರೋಪ ಮಾಡಿದ್ದು ಯಾರು? ಗುತ್ತಿಗೆದಾರರ ಸಂಘದ ಅಧ್ಯಕ್ಷ ಕೆಂಪಣ್ಣ ಅಲ್ಲವೇ ಎಂದು ಮರು ಪ್ರಶ್ನೆ ಮಾಡಿದರು.

ಬಳ್ಳಾರಿ ಬ್ಯಾನರ್ ಗಲಭೆ ಪ್ರಕರಣವನ್ನು ಸಿಬಿಐಗೆ ವಹಿಸಬೇಕೆಂದು ಆಗ್ರಹಿಸಿ ಬಿಜೆಪಿ ನಡೆಸಿದ ಪ್ರತಿಭಟನೆ ಮತ್ತು ಮುಂದಿನ ದಿನಗಳಲ್ಲಿ ನಡೆಯಬಹುದಾದ ಪಾದಯಾತ್ರೆ ಕುರಿತು ಪ್ರತಿಕ್ರಿಯಿಸಿದ ಅವರು, ನಾವು ವಿರೋಧ ಪಕ್ಷದಲ್ಲಿದ್ದಾಗ ಹಲವು ಪ್ರಕರಣಗಳನ್ನು ಸಿಬಿಐ ತನಿಖೆಗೆ ನೀಡುವಂತೆ ಒತ್ತಾಯಿಸಿದ್ದೇವೆ. ಅವರು ಯಾವ ಪ್ರಕರಣವನ್ನು ಸಿಬಿಐಗೆ ವಹಿಸಲಿಲ್ಲ. ಈಗ ಬಳ್ಳಾರಿ ಗಲಭೆ ಪ್ರಕರಣವನ್ನು ಸಿಬಿಐ ವಹಿಸಿ ಎಂದು ಕೇಳುವ ನೈತಿಕತೆ ಬಿಜೆಪಿಯವರಿಗೆ ಇದೆಯೇ ಎಂದು ಪ್ರಶ್ನಿಸಿದರು.

ಅವರ ಆಡಳಿತದಲ್ಲಿ ಬಿಜೆಪಿಯವರು ಒಂದೇ ಒಂದು ಪ್ರಕರಣವನ್ನು ಸಿಬಿಐಗೆ ವಹಿಸಿರುವುದನ್ನು ತೋರಿಸಲಿ ಎಂದು ಸವಾಲು ಹಾಕಿದರು.ಮೊದಲ ಅವಧಿಯಲ್ಲಿ ನಾನು ಮುಖ್ಯಮಂತ್ರಿ ಆಗಿದ್ದಾಗ ಡಿವೈಎಸ್‌ಪಿ ಗಣಪತಿ ಆತಹತ್ಯೆ ಪ್ರಕರಣದಲ್ಲಿ ಆರೋಪಕ್ಕೆ ಗುರಿಯಾಗಿದ್ದ ಕೆ.ಜೆ.ಜಾರ್ಜ್ ಪ್ರಕರಣ, ಧರ್ಮಸ್ಥಳದಲ್ಲಿ ಸೌಜನ್ಯ ಕೊಲೆ, ಲಾಟರಿ ಹಗರಣ, ಉತ್ತರಕನ್ನಡ ಜಿಲ್ಲೆಯಲ್ಲಿ ಪರೇಶ್ ಮೆಸ್ತಾ ಸಾವು ಸೇರಿದಂತೆ ಏಳೆಂಟು ಪ್ರಕರಣಗಳನ್ನು ಸಿಬಿಐ ತನಿಖೆಗೆ ವಹಿಸಿದ್ದೆ ಹೇಳಿದರು.

ಬಳ್ಳಾರಿ ಗಲಭೆ ಪ್ರಕರಣವನ್ನು ಮುಂದಿಟ್ಟುಕೊಂಡು ಬಿಜೆಪಿಯವರು ಜನಾಂದೋಲನ ಮಾಡುವುದಕ್ಕೆ ನಮ ಅಭ್ಯಂತರವಿಲ್ಲ. ವಿರೋಧ ಪಕ್ಷವಾಗಿ ಅವರು ಯಾವುದೇ ರೀತಿಯ ಪ್ರತಿಭಟನೆ ಮಾಡಬಹುದು. ಸರ್ಕಾರವಾಗಿ ಅವರಿಗೆ ಯಾವ ರೀತಿ ಉತ್ತರ ನೀಡಬೇಕು ಅದನ್ನು ನಾವು ಕೊಡುತ್ತೇವೆ ಎಂದರು.

ಬಳ್ಳಾರಿಯಲ್ಲಿ ನಿನ್ನೆ ನಡೆದ ಪ್ರತಿಭಟನೆಯಲ್ಲಿ ಶ್ರೀರಾಮುಲು ಮತ್ತು ಜನಾರ್ದನ ರೆಡ್ಡಿ ಅವರು ಕಾಂಗ್ರೆಸ್ ನಾಯಕರನ್ನು ಏಕವಚನದಲ್ಲಿಯೇ ನಿಂದಿಸಿರುವುದು ಅವರ ಸಂಸ್ಕೃತಿಯನ್ನು ತೋರಿಸುತ್ತದೆ. ಜನಾರ್ದನ ರೆಡ್ಡಿ ಬಳ್ಳಾರಿ ಭೇಟಿ ನೀಡಬಾರದು ಎಂದು ನಿಬಂಧ ಹಾಕಿದ್ದು ಯಾರು? ನೆನಪಿದೆಯೇ? ಆಗಿನ ಲೋಕಾಯುಕ್ತ ಸಂತೋಷ ಹೆಗ್ಡೆ ತಮ ವರದಿಯಲ್ಲಿ ರಿಪಬ್ಲಿಕ್ ಆಫ್ ಬಳ್ಳಾರಿ ಎಂದು ಬರೆದಿದ್ದರು. ಇದೆಲ್ಲಾ ಆಗಿದ್ದು ಜನಾರ್ದನ ರೆಡ್ಡಿಯಿಂದ ಅಲ್ಲವೇ ಎಂದು ಪ್ರಶ್ನಿಸಿದರು.

ಬಿಜೆಪಿಯವರಿಗೆ ಪ್ರಜಾಪ್ರಭುತ್ವದ ಮೇಲೆ ನಂಬಿಕೆ ಇಲ್ಲ. ಸರ್ವಾಧಿಕಾರಿ ಆಡಳಿತದ ಮೇಲೆ ಹೆಚ್ಚು ನಂಬಿಕೆ. ಈ ಹಿಂದೆ ಬಳ್ಳಾರಿಯಲ್ಲಿ ಲೋಕಸಭೆ ಚುನಾವಣೆಯಲ್ಲಿ ಎನ್.ವೈ.ಹನುಮಂತಪ್ಪ ಅಭ್ಯರ್ಥಿಯಾಗಿದ್ದರು. ಅವರ ಪರವಾಗಿ ಪ್ರಚಾರ ನಡೆಸಲು ವಿರೋಧ ಪಕ್ಷದ ನಾಯಕನಾಗಿದ್ದ ನಾನು ಮತ್ತು ಮತ್ತೊಬ್ಬ ನಾಯಕ ಸಿ.ಎಂ.ಇಬ್ರಾಹಿಂ ಬಳ್ಳಾರಿಗೆ ಹೋಗಿದ್ದೆವು. ಪ್ರಚಾರ ಮಾಡಲು ನಮಗೆ ಅಲ್ಲಿ ಜಾಗವನ್ನೇ ಕೊಟ್ಟಿರಲಿಲ್ಲ. ಕೊನೆಗೆ ದೇವಸ್ಥಾನವೊಂದರ ಬಳಿ ಪ್ರಚಾರ ಮಾಡಿ ಬರಬೇಕಾಯಿತು. ಅವರಿಗೆ ಪ್ರಜಾಪ್ರಭುತ್ವದಲ್ಲಿ ಹಾಗೂ ಸಂಸದೀಯ ವ್ಯವಸ್ಥೆಯ ಮೇಲೆ ನಂಬಿಕೆ ಇಲ್ಲ. ಸಂಸ್ಕೃತಿಯು ಇಲ್ಲ. ಗೂಂಡಾಗಿರಿ ಮಾಡಿಕೊಂಡು ಬದುಕುವವರಿಂದ ನಾವು ಪಾಠ ಕಲಿಯಬೇಕೆ? ಎಂದು ತಿರುಗೇಟು ನೀಡಿದರು.

ಕಾಂಗ್ರೆಸ್ ಪಕ್ಷ ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಮೇಲೆ ನಂಬಿಕೆ ಇಟ್ಟುಕೊಂಡಿದೆ. ಬಳ್ಳಾರಿ ಗಲಭೆ ಮತ್ತು ಅನಂತರ ನಿನ್ನೆ ನಡೆದ ಪ್ರತಿಭಟನೆ ಹಿಂದೆ ರಾಜಕೀಯ ದುರುದ್ದೇಶ ಹೊರತುಪಡಿಸಿದರೆ ಬೇರೆ ಯಾವ ಅಂಶಗಳು ಇಲ್ಲ ಕಾಣುತ್ತಿಲ್ಲ ಎಂದರು.

ಪ್ರತಿವರ್ಷದ ಆರಂಭದಲ್ಲಿ ವಿಧಾನ ಮಂಡಲದ ಅಧಿವೇಶನ ನಡೆಸುವುದು ಕಡ್ಡಾಯವಾಗಿದೆ. ಅದರಂತೆ ಜನವರಿ 22 ರಿಂದ ವಿಧಾನ ಮಂಡಲ ಅಧಿವೇಶನ ಕರೆಯಲಾಗಿದೆ. ಆ ವೇಳೆ ಉದ್ಯೋಗ ಖಾತ್ರಿ ಯೋಜನೆ ಬದಲಾವಣೆ ಕುರಿತು ಚರ್ಚೆ ನಡೆಸಲಾಗುವುದು ಎಂದರು.

ಈ ಹಿಂದೆ ಡಾ.ಮನಮೋಹನ ಸಿಂಗ್ ಪ್ರಧಾನಿಯಾಗಿದ್ದಾಗ ಜಾರಿಗೆ ತಂದಿದ್ದ ಉದ್ಯೋಗ, ಮಾಹಿತಿ, ಆಹಾರ ಮತ್ತು ಶಿಕ್ಷಣ ಹಕ್ಕು ಕಾಯಿದೆಗಳನ್ನು ನರೇಂದ್ರ ಮೋದಿ ಸರ್ಕಾರ ನಾಶ ಮಾಡಲು ಪ್ರಯತ್ನಿಸುತ್ತಿದೆ. ವಿಧಾನಮಂಡಲ ಅಧಿವೇಶನದಲ್ಲಿ ಈ ವಿಷಯ ಚರ್ಚೆ ನಡೆಸಲಾಗುತ್ತಿದೆ. ಉದ್ಯೋಗ ಖಾತ್ರಿ ಯೋಜನೆಯನ್ನು ಮರು ಸ್ಥಾಪಿಸಬೇಕು ಎಂದು ಒತ್ತಾಯಿಸಲಾಗುವುದು ಎಂದು ಅವರು ಹೇಳಿದರು.

ಸರಕಾರಿ ನೌಕರರ ಸಂಘದ ವಿವಿಧ ಬೇಡಿಕೆಗಳಿಗೆ ಖಂಡಿತ ಸ್ಪಂದಿಸುತ್ತೇನೆ ; ಭೋಸರಾಜ್



ಸಿರವಾರ ; ಸರಕಾರದ ಕೆಲಸ ದೇವರ ಕೇಲಸ ಎಂಬ ವೇಧವಾಕ್ಯದಂತೆ ಸರಕಾರಿ ನೌಕರರ ಸಂಘದ ಪದಾಧಿಕಾರಿಗಳು ನೌಕರರ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕೊಡಿಸುವ ನಿಟ್ಟನಲ್ಲಿ ಕಾರ್ಯ ನಿರ್ವಹಿಸುತ್ತದೆ. ಸರಕಾರಿ ನೌಕರರ ಸಂಘವು ನೌಕರರ ಶಕ್ತಿಯನ್ನು ತೋರಿಸುತ್ತದೆ. ಸರಕಾರಿ ನೌಕರರ ಸಂಘದ ಬೇಡಿಕೆಗಳಿಗೆ ಖಂಡಿತ ಸ್ಪಂದಿಸುತ್ತೇನೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಭೋಸರಾಜ್ ಹೇಳಿದರು.

ಅವರು ಪಟ್ಟಣದ ಹೋಲಿ ಕ್ರಾಸ್ ಪ್ರೌಢ ಶಾಲಾ ಆವರಣದಲ್ಲಿ ನಡೆದ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಸಿರವಾರ ತಾಲೂಕು ವತಿಯಿಂದ 2024 - 25 ನೇ ಸಾಲಿನ ವಾರ್ಷಿಕ ಮಹಾಸಭೆ ಹಾಗೂ ವಿವಿಧ ಕ್ಷೇತ್ರದಲ್ಲಿ ಸಾಧನಗಳು ಮಾಡಿದ ಸಾಧಕರಿಗೆ ಸನ್ಮಾನ ಹಾಗೂ ನಿವೃತ್ತ ಸೈನಿಕರಿಗೆ ಸನ್ಮಾನ ,ತಾಲೂಕು ಸೇವಾ ರತ್ನ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವನ್ನು ಹಾಗೂ ಸರಕಾರಿ ನೌಕರರ ಸಂಘದ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಸಮಾಜದಲ್ಲಿ ನೌಕರರ ಸೇವೆ ಅಪಾರ. ರಾಜ್ಯ ಸರ್ಕಾರವು ಸರಕಾರಿ ನೌಕರರ ಸಂಘಕ್ಕೆ ಆನೇಕ ರೀತಿಯ ಸೌಲಭ್ಯ

3ನೇ ಪುಟಕ್ಕೆ

ರಾಜಶೇಖರ ನುಲಿ ಅವರ ತಮ್ಮ ಸಂಗೀತದ ಅನುಭವ ದಾರೆ ಕಾರ್ಯ ಶ್ಲಾಘನೆ

ರಾಯಚೂರು, ಜ.18-

ಸುರಾಗ ಸಂಗೀತ ಅಕಾಡೆಮಿ ಟ್ರಸ್ಟ್ ಬೆಂಗಳೂರು ಹಾಗೂ ಗೆಳೆಯರ ಬಳಗದಿಂದ ಸುಗಮ ಸಂಗೀತ ಕಾರ್ಯಾಗಾರ ಹಾಗೂ ಪ್ರತಿಭಾನ್ವೇಷಣ ಕಾರ್ಯಕ್ರಮ ನಡೆಯಿತು.



ನಗರದ ಶ್ರೀ ಸಾಯಿ ಮಂದಿರದ ಸಭಾಂಗಣ ದಲ್ಲಿ ಹಮ್ಮಿಕೊಂಡ ಕಾರ್ಯಾಗಾರಕ್ಕು ಮುನ್ನ ಸಂಗೀತ ನಿರ್ದೇಶಕರಾದ ರಾಜಶೇಖರ ನುಲಿ ಅವರ ಸಂಗೀತ ಗುರುಗಳಾದ ಪಂ.ನಾರಾಯಣ ಡಗೆ ಅವರ ಭಾವಚಿತ್ರಕ್ಕೆ ಮಾಲಾರ್ಪಣೆಯನ್ನು ಕವಿತಾ ಸಾಯಿಕಿರಣ್ ಆದೋನಿ ಮಾಲಾರ್ಪಣೆ ಮಾಡಿ ಚಾಲನೆ ನೀಡಿದರು.

ಶಿಕ್ಷಕ ದಂಡಪ್ಪ ಬಿರಾದಾರ ಮಾತನಾಡಿ, ಸ್ಥಳೀಯ ರಾಗಿ ಬೆಂಗಳೂರಿನಲ್ಲಿ ನೆಲೆಸಿ ಸಂಗೀತ ನಿರ್ದೇಶಕರಾಗಿ ಜಿ ವಾಹಿನಿಯ ಗ್ರ್ಯಾಂಡ್ ಜೂರಿಯಾದ ರಾಜಶೇಖರ ನುಲಿ ಅವರು ತಮ್ಮ ಸಂಗೀತದ ಅನುಭವ ದಾರೆ ಎರೆಯಲು ಮುಂದಾಗಿರುವುದು ಶ್ಲಾಘನಿಯ ಎಂದರು.

ನುಲಿ ಕುಟುಂಬ ರಾಯಚೂರಿನ ಸಂಗೀತ ಶರಣ ಪರಂಪರೆ ಜೊತೆಗೆ ರಂಗಭೂಮಿ ಯನ್ನು ಉಳಿಸಿ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ. ಅಂಬಯ್ಯ ನುಲಿ, ರಾಜಶೇಖರ ನುಲಿ, ಚಿದಾನಂದ ನುಲಿ ಸಂಗೀತ ಕ್ಷೇತ್ರದಲ್ಲಿ ತಮ್ಮ ಸೇವೆ ಸಲ್ಲಿಸುತ್ತಿದ್ದಾರೆ. ಸ್ಥಳೀಯ ಸಂಗೀತ ಪ್ರತಿಭೆಗಳ ಗುರುತಿಸಿ ಪ್ರೋತ್ಸಾಹಿಸಲು ಕಾರ್ಯಾಗಾರ ಆಯೋಜಿಸಿ ವೇದಿಕೆ ಕಲ್ಪಿಸಲು ಮುಂದಾಗಿದ್ದು ಕಾರ್ಯಾ ಗಾರಕ್ಕೆ ಬಂದ ಮಕ್ಕಳು, ಸಂಗೀತ ವಿದ್ಯಾ ರ್ಥಿಗಳು ಸದ್ಬಳಕೆ ಮಾಡಿಕೊಳ್ಳಲು ಸಲಹೆ ಮಾಡಿದರು.ನಂತರ ಸುರಾಗ ಸಂಗೀತ ಟ್ರಸ್ಟ್ ಮುಖ್ಯಸ್ಥರು ಹಾಗೂ ಸಂಗೀತನಿರ್ದೇಶಕ ರಾಜಶೇಖರ ನುಲಿ ಅವರು ಶಾಸ್ತ್ರೀಯ ಮತ್ತು ಸುಗಮ ಸಂಗೀತ ಶೈಲಿಯ ಹಾಡುಗಾರಿಕೆ ಆಲಾಪ, ರಾಗ, ಹಾಡು ಕಲಿಯುವಿಕೆ ಶೈಲಿ ಬಗ್ಗೆ ಮಾಹಿತಿ ನೀಡುತ್ತಲೆ ಕಾರ್ಯಾಗಾರಕ್ಕೆ ಆಗಮಿಸಿದ ವಿದ್ಯಾರ್ಥಿಗಳಿಗೆ ಹಾಡು ಹಾಡಿಸುತ್ತಲೆ ತರಬೇತಿ ನೀಡಿದರು.ಈ ಸಂದರ್ಭದಲ್ಲಿ ಕವಿತಾ ಕಿರಣ್ ಆದೋನಿ, ಚಂದ್ರಶೇಖರ್, ಬಸವರಾಜ ಹೊಸೂರು, ಚಂದ್ರ ಶೇಖರ ನುಲಿ, ಭೀಮಯ್ಯ ಕರಡಿ ಹೊಸೂರು ಸೇರಿದಂತೆ ಇತರರಿದ್ದರು.



ಜಿಲ್ಲಾ ಏಮ್ಸ್ ಹೋರಾಟ 1347 ನೇ ದಿನಕ್ಕೆ

ರಾಯಚೂರು,ಜ.18-

ರಾಯಚೂರು ಜಿಲ್ಲಾ ಏಮ್ಸ್() ಹೋರಾಟ ಸಮಿತಿ ನಡೆಸುತ್ತಿರುವ ಅನಿರ್ದಿಷ್ಟ ಧರಣೆ ಸತ್ಯಾಗ್ರಹ ಇಂದಿಗೆ 1347 ನೇ ದಿನಕ್ಕೆ ಕಾಲಿಟ್ಟಿದೆ.

ಆರೋಗ್ಯ ವಿಚಾರದಲ್ಲಿ ವಂಚಿತಗೊಂಡ, ರೋಗ ಗ್ರಸ್ತ ರಾಯಚೂರಿಗೆ ಏಮ್ಸ್ ಆರೋಗ್ಯ ಸಂಸ್ಥೆಯನ್ನು ಮಂಜೂರು ಮಾಡಲೇಬೇಕೆಂದು ಕೇಂದ್ರ ಸರಕಾರವನ್ನು ಒತ್ತಾಯಿಸಿದರು.

ಇಂದು ನಡೆದ ಧರಣೆ ಸತ್ಯಾಗ್ರಹದಲ್ಲಿ ಅಶೋಕ್ ಕುಮಾರ್ ಸಿ .ಕೆ ಜೈನ, ಜಗದೀಶ್ ಪೂರ್ತಿಪಲ್ಲಿ, ವಿನಯಕುಮಾರ್ ಚಿತ್ರಗಾರ, ಎಸ್. ತಿಮ್ಮಾರೆಡ್ಡಿ, ಬಾಬು ಮೇಧಾ, ಎಸ್ ಹನುಮಂತಪ್ಪ, ಕಾಮರಾಜ್ ಪಾಟೀಲ್, ನರಸಪ್ಪ ಬಾಡಿಯಾಳ, ಶ್ರೀನಿವಾಸ ಕಲವಲದೊಡ್ಡಿ, ಶ್ರೀನಿವಾಸ ನಾಗಲದಿನ್ನಿ, ಶಾಂತಗೌಡ ಸುಬೇದಾರ ಶ್ರೀನಿವಾಸ ಆದೋನಿ ಮುಂತಾದವರು ಭಾಗವಹಿಸಿದ್ದರು.

ಪುಸ್ತಕ ಭಂಡಾರದಿಂದ ಜ್ಞಾನ ವಿಕಸನ- ಶಿವಾನಂದ ಕೆಳಗಿಮನಿ



ರಾಯಚೂರು,ಜ.18-

ಪುಸ್ತಕ ಜ್ಞಾನದ ಭಂಡಾರ ವಿದ್ದಂತೆ ಹಾಗೂ ಪುಸ್ತಕ ಜ್ಞಾನ ಪೀಳಿಗೆಯಿಂದ ಪೀಳಿಗೆಗೆ ಹರಿದು ಹೋಗುವ ಮೂಲಕ ಮನುಷ್ಯನ ಜ್ಞಾನವನ್ನು ವಿಕಸನಗೊಳಿಸುತ್ತದೆ ಎಂದು ಕೃಷಿ ವಿಶ್ವವಿದ್ಯಾಲಯ ಕುಲಪತಿ ಶಿವಾನಂದ ಕೆಳಗಿಮನಿ ಅವರು ಹೇಳಿದರು.

ಅವರಿಂದು ನಗರದ ಪಂಡಿತ್ ಸಿದ್ದರಾಮ ಕಲಾ ಸಂಕುಲ ಸಂಸ್ಥೆ ವತಿಯಿಂದ ಆಯೋಜಿಸಿದ ಪುಸ್ತಕ ಸಂತೆ ಹಾಗೂ ಸಂಕ್ರಾಂತಿ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಆಧುನಿಕ ಕಾಲಘಟ್ಟದಲ್ಲಿ ಪುಸ್ತಕ ಗಳ ಪಾತ್ರ ಮಹತ್ವದ್ದು. ಬಿಡು ವಿಲ್ಲದ ಜೀವನದಲ್ಲಿ ಪುಸ್ತಕ ಭಂಡಾರ ಮನಸ್ಸಿ ಗೆ ಶಾಂತಿಯನ್ನು ನೀಡುವ ಕಾಮಧೇನು ಎಂದು ಅವರು ಹೇಳಿದರು.ಪುಸ್ತಕ ಭಂಡಾರಗಳು ಮನುಷ್ಯನ ಜ್ಞಾನವನ್ನು ವಿಕಸನಗೊಳಿಸುತ್ತದೆ ಎಂದರು.

ಪುಸ್ತಕ ಕೇವಲ ಜ್ಞಾನದ ಭಂಡಾರದ ಮಾತ್ರವಲ್ಲದೆ ಆಯಾ ಕಾಲದ ತಕ್ಕಂತೆ ಚರಿತ್ರೆ, ಸಾಮಾಜಿಕ ಸಂಸ್ಕೃತಿ ಮತ್ತು ಪರಂಪರೆಯನ್ನು ಪರಿಚಯ ಮಾಡುತ್ತಿದೆ ಎಂದರು.ಪುಸ್ತಕ ಎಂದರೆ ತಲೆಮಾರಿನಿಂದ ತಲೆಮಾರಿಗೆ ಕೊಂಡೊಯ್ಯುತ್ತದೆ. ನಾವು ಯಾವುದಾದರು ಪ್ರದೇಶದಲ್ಲಿ ನೆಲೆಸಿದಾಗ ಜಗತ್ತಿನ ಎಲ್ಲ ಜ್ಞಾನವನ್ನು ಪರಿಚಯ ಮಾಡುವ ಭಂಡಾರ ಯಾವುದದರೂ ಇದ್ದಾರೆ ಅದು ಪುಸ್ತಕ. ಜಾಗತಿಕ ಮಟ್ಟದಲ್ಲಿ ಅನೇಕ ರೀತಿಯ ವೈದ್ಯಮಯ

3ನೇ ಪುಟಕ್ಕೆ

ಶ್ರೀ ಮಾದಾರ ಚನ್ನಯ್ಯ ಸೇವಾ ಸಮಿತಿ ರಾಯಚೂರು ನಗರ ಅಧ್ಯಕ್ಷರಾಗಿ ಮಂಚಾಲ್ ಭೀಮಣ್ಣ ಆಯ್ಕೆ



ರಾಯಚೂರು,ಜ.18-

ಶ್ರೀ ಮಾದರ ಚನ್ನಯ್ಯ ಸೇವಾ ಸಮಿತಿ ರಾಯಚೂರು ಜಿಲ್ಲೆಯ ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಪದಾಧಿಕಾರಿಗಳ ಸಭೆಯು ನಗರದ ಮನೋರಂಜನ ಕೇಂದ್ರದಲ್ಲಿ ನಡೆಯಿತು.

ಸಭೆಯಲ್ಲಿ ನಗರ ವಿಧಾನಸಭಾ ಕ್ಷೇತ್ರದ ಪದಾಧಿಕಾರಿಗಳ ನೇಮಕ ಹಾಗೂ ಸೇವಾ ಸಮಿತಿಯ ಕಾರ್ಯ ಯೋಜನೆಗಳು ಮತ್ತು ಚಟುವಟಿಕೆಗಳ ಬಗ್ಗೆ ವಿಸ್ತಾರವಾಗಿ ಚರ್ಚಿಸಲಾಯಿತು.

ಶ್ರೀ ಮಾದರ ಚೆನ್ನಯ್ಯ ಸೇವಾ ಸಮಿತಿ ರಾಜ್ಯಾಧ್ಯಕ್ಷರಾದ ಮಂಜುನಾಥ್ ಹೂಡಿ ರಾಜ್ಯ ಗೌರವ ಸಲಹೆಗಾರರಾದ ರವೀಂದ್ರ ಜಲ್ದಾರ್ ರಾಜ್ಯ ಉಪಾಧ್ಯಕ್ಷರಾದ ಜೆ.ಎಂ.ವೀರೇಶ ಇವರ ಶಿಫಾರಸ್ಸಿನ ಮೇರೆಗೆ ಸಭೆಯಲ್ಲಿ ಸೇವಾ ಸಮಿತಿಯ ರಾಯಚೂರು ಜಿಲ್ಲೆಯ ಅಧ್ಯಕ್ಷರಾದ ಜೆ.ಎಂ.ಮೌನೇಶ ಇವರು ಸಭೆಯಲ್ಲಿ ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಅಧ್ಯಕ್ಷರನ್ನಾಗಿ ಮಾದಿಗ ಸಮಾಜದ ಹಿರಿಯ ಮುಖಂಡರು ಹಾಗೂ ನಗರಸಭೆಯ ಮಾಜಿ ಸದಸ್ಯರಾದ ಮಂಚಾಲ್ ಭೀಮಣ್ಣ ಇವರನ್ನು ಸೇವಾ ಸಮಿತಿಯ ನಗರ ಅಧ್ಯಕ್ಷರನ್ನಾಗಿ

3ನೇ ಪುಟಕ್ಕೆ

ಈರಣ್ಣ ಬೆಂಗಾಲಿಯವರ ಹಕ್ಕಿಗಳ ಛಾಯಾ ಚಿತ್ರ ಪ್ರದರ್ಶನ

ಹಕ್ಕಿಗಳ ಮಾಹಿತಿ ಪ್ರಬೇಧಗಳ ಮಾಹಿತಿಗೆ ಛಾಯಾಚಿತ್ರ ಪೂರಕ



ರಾಯಚೂರು,ಜ.17-

ಪಕ್ಷಿಗಳು ಉತ್ತಮ ಪರಿಸರದ ಸಂಕೇತವಾಗಿದ್ದು, ಪರಿಸರದ ಪೂರಕ ವಾತಾವರಣ ನಿರ್ಮಿಸುವಲ್ಲಿ ಅವು ಮಹತ್ತರ ಪಾತ್ರ ವಹಿಸುತ್ತವೆ ಎಂದು ವಲಯ ಅರಣ್ಯ ಅಧಿಕಾರಿ ರಾಜೇಶ್ ನಾಯಕ ಹೇಳಿದರು.

ನಗರದ ಟಾಗೋರ್ ಸಭಾಂಗಣದಲ್ಲಿ ಪ್ರಯತ್ನ ವೆಲ್ ಫೇರ್ ಟ್ರಸ್ಟ್ ವತಿಯಿಂದ ಆಯೋಜಿಸಲಾಗಿದ್ದ ಪಕ್ಷಿಗಳ ಛಾಯಾಗ್ರಾಹಕ ಈರಣ್ಣ ಬೆಂಗಾಲಿ ಅವರು ತೆಗೆದ ರಾಯಚೂರಿನ 150ಕ್ಕೂ ಹೆಚ್ಚು ಪಕ್ಷಿಗಳ ಫೋಟೋ ಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪಕ್ಷಿಗಳು ಭೂಲೋಕದ ಅದ್ಭುತ ಜೀವಿಗಳಾಗಿದ್ದು ಮನುಕುಲಕ್ಕೆ ಸಹಕಾರಿ ಎಂದು ತಿಳಿಸಿದರು. ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಪಕ್ಷಿಗಳನ್ನು ಉಳಿಸುವತ್ತ ಗಮನಹರಿಸಬೇಕು ಎಂದರು.

ಪಕ್ಷಿಗಳ ಛಾಯಾಗ್ರಾಹಕ ಈರಣ್ಣ ಬೆಂಗಾಲಿ ಮಾತನಾಡಿ, ರಾಯಚೂರಿನಲ್ಲಿ ಇನ್ನೂರಕ್ಕೂ ಅಧಿಕ ಪ್ರಭೇದದ ಹಕ್ಕಿಗಳು ಇದ್ದು, ಅವುಗಳನ್ನು ಉಳಿಸಿಕೊಂಡು ಹೋಗುವ ಪ್ರಯತ್ನ ಆಗಬೇಕು. ಜನರು ಹಕ್ಕಿಗಳ ಬಗ್ಗೆ ಒಲವು ಬೆಳೆಸಿಕೊಂಡು, ಪಕ್ಷಿಗಳ ಮಹತ್ವ ಅರಿಯಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅಭಿಜ್ಞಾನ ಶಾಲೆಯ ರಮೇಶ್ ಮಾತನಾಡಿ, ಈರಣ್ಣ ಬೆಂಗಾಲಿ ಅವರು ರಾಯಚೂರಿನ ಪಕ್ಷಿಗಳ ಫೋಟೋಗಳನ್ನು ತೆಗೆದು ಸಾರ್ವಜನಿಕರಿಗೆ ಪರಿಚಯಿಸಿರುವುದು ಅಭಿನಂದನೀಯ. ಪರಿಸರ ಕಾರ್ಯಕ್ಕೆ ನಾವು ಯಾವಾಗಲೂ ಜೊತೆ ಇರಬೇಕು. ಉತ್ತಮ ಪರಿಸರವನ್ನು ಕಾಪಾಡುವಲ್ಲಿ ಎಲ್ಲರೂ ಗಮನಹರಿಸಬೇಕು. ಪಕ್ಷಿಗಳು ಇರದಿದ್ದರೆ ನಾವಿಲ್ಲ ಎಂಬುದನ್ನು ಮರೆಯಬಾರದು ಎಂದು ಹೇಳಿದರು.


ಈ ಸಂದರ್ಭದಲ್ಲಿ ಮೊಹಿಯುದ್ದೀನ್ ಪೀರಜಾದೆ, ವೀರಹನುಮಾನ, ನೀಲಕಂಠ

3ನೇ ಪುಟಕ್ಕೆ

ನರೇಗಾ ಬಚಾವ್ ಸಂಗ್ರಾಮ್ ಆಂದೋಲನ್ : ವಿಬಿ. ಜಿ. ರಾಮಜಿ. ಕಾಯ್ದೆ ವಿರುದ್ಧ ಚಳುವಳಿ

ಸಿಂಧನೂರು,ಜ.18-

ವಿಧಾನಸಭಾ ಕ್ಷೇತ್ರ : ಮಾನ್ಯ ಶ್ರೀ ಹಂಪನಗೌಡ ಬಾದರ್ಲಿ ಶಾಸಕರು ಸಿಂಧನೂರು ವಿಧಾನ ಸಭಾ ಕ್ಷೇತ್ರ. ಇವರ ನೇತೃತ್ವದಲ್ಲಿ. ಸಿಂಧನೂರು ಮತಕ್ಷೇತ್ರದಲ್ಲಿ ಬರುವ. 25. ಗ್ರಾಮ ಪಂಚಾಯಿತಿಗಳಲ್ಲಿ. ವಿ.ಬಿ. ಜಿ. ರಾಮ್ ಜಿ. ಕಾಯ್ದೆ ವಿರುದ್ಧ ನರೇಗಾ ಬಚಾವ್ ಸಂಗ್ರಾಮ ಆಂದೋಲನ ಚಳುವಳಿ ಹಮ್ಮಿಕೊಂಡಿದ್ದು. ಈ ಕಾರ್ಯಕ್ರಮಕ್ಕೆ ಕೆಪಿಸಿಸಿ ಕಾರ್ಯಾಧ್ಯಕ್ಷ ರಾದ ಮಾನ್ಯ ಶ್ರೀ ವಸಂತ್ ಕುಮಾರ್ ಅವರು. ಹಾಗೂ.ಸಂಸದರು. ಶಾಸಕರು. ವಿಧಾನ ಪರಿಷತ್ ಸದಸ್ಯರು. ಮತ್ತು ಜಿಲ್ಲಾ ಕಾಂಗ್ರೆಸ್. ಸಮಿತಿ ಅಧ್ಯಕ್ಷರಾದ ಶ್ರೀ ಬಸವರಾಜ ಪಾಟೀಲ್ ಇಟಗಿ. ಹಾಗೂ ಜಿಲ್ಲಾ ಪಂಚಾಯತ್ ಮಾಜಿ



ಸದಸ್ಯರುಗಳು. ತಾಲೂಕ ಪಂಚಾಯತ್ ಮಾಜಿ ಸದಸ್ಯರುಗಳು. ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷರು ಉಪಾಧ್ಯಕ್ಷರು ಹಾಗೂ ಸದಸ್ಯರು. ಪಕ್ಷದ ಕಾರ್ಯಕರ್ತರು ಮುಖಂಡರು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು. ಸಿಂಧನೂರು ಶಾಸಕರಾದ ಶ್ರೀ ಹಂಪನಗೌಡ ಬಾದರ್ಲಿ ಅವರು ತಿಳಿಸಿದರು. ಕಾರ್ಯಕ್ರಮದ ವಿವರ. ಹಾಗೂ ಕಾರ್ಯಕ್ರಮ ನಡೆಯುವ ಸ್ಥಳದ. ಬಗ್ಗೆ ಮಾಹಿತಿ ನೀಡಿದರು. ದಿನಾಂಕ 19.01.2026 ಸೋಮವಾರ. ಬೆಳಿಗ್ಗೆ 10 ರಿಂದ 11:30ರ ವರೆಗೆ. ರಾಮತ್ನಾಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ. ರಾಮತ್ನಾಳ ಗ್ರಾಮದ ಶ್ರೀ ಬಸವಣ್ಣನ ಗುಡಿ. ಕಲ್ಯಾಣ ಮಂಟಪದ ಹತ್ತಿರ. ಮತ್ತು ಮಧ್ಯಾಹ್ನ 12 ರಿಂದ 2 ರವರೆಗೆ. ರಾಗಲಪರ್ವಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ. ಸ್ಥಳ. ರಾಗಲಪರ್ವಿ ಗ್ರಾಮದ ದರ್ಗಾ ಹತ್ತಿರ ಖಾಲಿ ಜಾಗದಲ್ಲಿ. ಮಧ್ಯಾಹ್ನ. 3.ರಿಂದ. 4:30ರ ವರೆಗೆ. ಗೋನವಾರ್ ಪಂಚಾಯತಿ ವ್ಯಾಪ್ತಿಯಲ್ಲಿ. ಸ್ಥಳ. ಗೋನವಾರ ಗ್ರಾಮದ. ಶ್ರೀ ಘನಮಠೇಶ್ವರ ದೇವ ಸ್ಥಾನದ. ಆವರಣದಲ್ಲಿ. ಮತ್ತು ಸಾಯಂಕಾಲ.5.ರಿಂದ 6. ಗಂಟೆವರೆಗೆ. ಹಡಗಿನಾಳ ಗ್ರಾಮದಲ್ಲಿ. ಹಡಗಿನ ಗ್ರಾಮದ ವೆಂಕಟೇಶ್ವ. ದರ್ಜೆ ಇವರ ಮನೆಯ ಆವರಣದಲ್ಲಿ. ನರೇಗಾ ಬಚಾವ ಸಂಗ್ರಾಮ ಆಂದೋಲನ. ವಿ. ಬಿ. ಜಿ. ರಾಮ್ ಜಿ. ಕಾಯ್ದೆ ವಿರುದ್ಧ ಚಳುವಳಿಯ. ಕಾರ್ಯಕ್ರಮಗಳು ನಡೆಯಲಿದ್ದು. ಹೆಚ್ಚಿನ ಸಂಖ್ಯೆಯಲ್ಲಿ ಜನರನ್ನು ಭಾಗವಹಿಸಲು. ಈ ಸಂದರ್ಭದಲ್ಲಿ ಕರೆ ನೀಡಿದರು.

ಬಲ್ಡೋಟ ತೊಲಗಿಸಿ ಕೊಪ್ಪಳ ಉಳಿಸಿ ಸಹಿ ಆಂದೋಲನಕ್ಕೆ ಬಸವರಾಜ ಬಳ್ಳೊಳ್ಳಿ ಚಾಲನೆ



ಕೊಪ್ಪಳ,ಜ.18-

ನಗರದ ನಗರಸಭೆ ವಾಣಿಜ್ಯ ಸಂಕೀರ್ಣದ ಮುಂಭಾಗದಲ್ಲಿ ಬಲ್ಡೋಟಾ ತೊಲಗಿಸಿ ಕೊಪ್ಪಳ ಉಳಿಸಿ ಎಂಬ ಪರಿಸರ ಜಾಗೃತಿ ಸಹಿ ಆಂದೋಲನಕ್ಕೆ ಚಾಲನೆ ನೀಡಲಾಯಿತು. ನಗರದ ಪ್ರಮುಖ ವಾಣಿಜ್ಯೋದ್ಯಮಿ ಬಸವರಾಜ ಬಳ್ಳೊಳ್ಳಿ ಅವರು ಸಹಿ ಮಾಡುವ ಮೂಲಕ ಆಂದೋಲನವನ್ನು ಉದ್ಘಾಟಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ನಂತರ ನೆರೆದವರನ್ನು ಉದ್ದೇಶಿಸಿ ಮಾತನಾಡಿದ ಅವರು, ಕೊಪ್ಪಳ ನಗರ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಗೆ ಕಾರ್ಖಾನೆಗಳಿಂದ ಹೊರಬರುವ ವಿಷಾನಿಲ ಮತ್ತು ಕಂದು ಧೂಳು ವ್ಯಾಪಕವಾಗಿ ಹರಡುತ್ತಿದೆ. ಈ ಧೂಳು ನಮ್ಮ ಬಟ್ಟೆಗಳ ಮೇಲೆ ಬೀಳುತ್ತಿರುವುದನ್ನು ಮಾತ್ರ ನಾವು ಗಮನಿಸುತ್ತಿದ್ದೇವೆ, ಆದರೆ ನಮ್ಮ ಶ್ವಾಸಕೋಶದ ಮೂಲಕ ದೇಹದೊಳಗೆ ಸೇರುತ್ತಿರುವ ವಿಷಕಾರಿ ಅಂಶಗಳು ನಮ್ಮ ಆರೋಗ್ಯದ ಮೇಲೆ ಎಂತಹ ಭೀಕರ ಪರಿಣಾಮ ಬೀರುತ್ತಿವೆ ಎಂಬುದು ನಮಗೆ ಅರಿವಾಗುತ್ತಿಲ್ಲ ಎಂದು ಆತಂಕ ವ್ಯಕ್ತಪಡಿಸಿದರು.

ಗಂಭೀರ ರೋಗಗಳು ಬಾಧಿಸಿದ ಮೇಲೆ ಎಚ್ಚೆತ್ತುಕೊಳ್ಳುವುದಕ್ಕಿಂತ ಮುಂಚಿತವಾಗಿಯೇ ಎಚ್ಚರಗೊಳ್ಳುವುದು ಕ್ಷೇಮ. ವಿಷಕಾರಿ ಅನಿಲ ಹೊರಸೂಸುವ ಮತ್ತು ಪರಿಸರಕ್ಕೆ ಮಾರಕವಾಗಿರುವ ಕಾರ್ಖಾನೆಗಳನ್ನು ಈ ಭಾಗದಿಂದ ತೊಲಗಿಸಲು ಇದು ಸರಿಯಾದ ಸಮಯ. ಕೊಪ್ಪಳದ ಭವಿಷ್ಯದ ದೃಷ್ಟಿಯಿಂದ ಪ್ರತಿಯೊಬ್ಬರೂ ಈ ಹೋರಾಟದಲ್ಲಿ ಪಾಲ್ಗೊಳ್ಳಬೇಕು, ಎಂದು ಅವರು ಕರೆ ನೀಡಿದರು.

ಈ ಆಂದೋಲನದಲ್ಲಿ ಉದ್ಯಮಿ ಗವಿಸಿದ್ದಪ್ಪ ಮುದಗಲ್, ಪರಮೇಶ್ವರಪ್ಪ ಕೊಪ್ಪಳ, ಮಾನವಿಯ ಶರಣಬಸವ ಬೆಟ್ಟದೂರು ಅವರು ಬೆಂಬಲಿಸಿ ಮಾತನಾಡಿದರು.

ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಇದರ ಜಂಟಿ ಕ್ರಿಯಾ ವೇದಿಕೆ ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು, ಬಿ.ಜಿ. ಕರಿಗಾರ, ರವಿ ಕಾಂತನವರ, ಎಸ್.ಬಿ.ರಾಜೂರು, ಶಂಭುಲಿಂಗಪ್ಪ ಹರಗೇರಿ, ಸಂಚಾಲಕ ಮಲ್ಲಿಕಾರ್ಜುನ ಬಿ. ಗೋನಾಳ, ಆಂದೋಲನ ಯುವ ಮುಂದಾಳು ಸುಭಾನ್ ನೀರಲಗಿ, ಮಂಜುನಾಥ ಕವಲೂರು, ಶರಣು ಪಾಟೀಲ್, ಸಂಚಾಲಕರಾದ ಮಂಜುನಾಥ ಜಿ. ಗೊಂಡಬಾಳ, ಶರಣು ಗಡ್ಡಿ, ಮಹಾಂತೇಶ ಕೊತಬಾಳ, ಸದಾಶಿವ್ ಪಾಟೀಲ್, ಮೂಕಪ್ಪ ಮೇಸ್ತ್ರಿ ಬಸಾಪುರ, ಗವಿಸಿದ್ದಪ್ಪ ಹಲಿಗಿ, ಮಹಾದೇವಪ್ಪ ಮಾವಿನಮಡು, ಅಮಿತ್ ಮಾಲಗಿತ್ತಿ, ವಿಜಯ ಮಹಾಂತೇಶ ಹಟ್ಟಿ, ಶಿವಪ್ಪ ಜಲ್ಲಿ, ಮಖ್ಬುಲ್ ರಾಯಚೂರು, ವಿದ್ಯಾರ್ಥಿಗಳು ಇದ್ದರು.



ಸಿ.ಎ ಇಂಗಿನಶೆಟ್ಟಿ ಕಾಲೇಜಿನಲ್ಲಿ ಬಿಳ್ಕೊಡುಗೆ ಸಮಾರಂಭ

ಶಹಾಬಾದ್,ಜ.18-

ಕಠಿಣ ಪರಿಶ್ರಮದಿಂದ ಅಧ್ಯಯನ ಮಾಡಿದರೆ ಯಾವುದೇ ಕ್ಷೇತ್ರದಲ್ಲಾದರೂ ಸಾಧನೆ ಮಾಡಲು ಸಾಧ್ಯ. ಸಾಧನೆಗೆ ಪರಿಶ್ರಮವೇ ಹೊರತು ಅನ್ಯಮಾರ್ಗವಿಲ್ಲ ಎಂದು ಕಾಲೇಜಿನ ಉಪನ್ಯಾಸಕಿ ಶರಣಮ್ಮ ಕೊಳ್ಳಿ ಹೇಳಿದರು.

ಶಹಾಬಾದ್ ನಗರದ ಪ್ರತಿಷ್ಠಿತ ಶ್ರೀ ಸಿ.ಎ ಇಂಗಿನಶೆಟ್ಟಿ ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ಅಂಕಗಳ ಜೊತೆಗೆ ಜೀವನದ ಮೌಲ್ಯಗಳು ಬೆಳೆಸಿಕೊಳ್ಳಬೇಕಾದ ಅಗತ್ಯವಿದೆ. ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ನಿರಾಶರಾಗಬಾರದು. ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು ಕಠಿಣ ಪರಿಸ್ಥಿತಿ ಎದುರಿಸುವ ಛಲ ವಿದ್ಯಾರ್ಥಿಗಳು ರೂಡಿಸಿಕೊಳ್ಳಬೇಕು ಎಂದರು.

ಸಂಸ್ಥೆಯ ಹಿರಿಯ ಉಪನ್ಯಾಸಕ ರಾಜಕುಮಾರ ಭಾಸರ್ದ್ಕ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಬಹಳ ಪ್ರಮುಖವಾಗಿರುತ್ತದೆ, ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಬೇಕು. ಸಕಾರಾತ್ಮಕ ಚಿಂತನೆಗಳು ಮೈಗೂಡಿಸಿಕೊಳ್ಳಬೇಕು, ಆತ್ಮವಿಶ್ವಾಸದಿಂದ ಮುನ್ನಡೆದರೆ ಜೀವನದಲ್ಲಿ ಏನಾದರೂ ಸಾಧಿಸಬಹುದು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತುಗಳನ್ನು ಹೇಳಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ದಿಲೀಪ್ ಎಲ್ ಶೆಟ್ಟಿ, ಸದಸ್ಯರಾದ ಅನಿಲ್ ಕುಮಾರ ಬೋಗೌರ್‌ಕರ್, ಎಸ್.ಜಿ.ವರ್ಮಾ ಹಿಂದಿ ಮಾಧ್ಯಮ ಪ್ರೌಢಶಾಲೆಯ ಮುಖ್ಯ ಗುರುಗಳಾದ ಮಲ್ಲಿನಾಥ್ ಪಾಟೀಲ್, ಉಪನ್ಯಾಸಕರಾದ ಸಾಬಣ್ಣ ಗುಡ್ಡಾ, ಶರಣಪ್ಪ ಹಲಕಟರ್, ಪದ್ಮಶ್ರೀ ಜೋಶಿ, ದೀಪಾ, ಅಶ್ವಿನಿ ಮೋಹಿತೆ, ಸುಮರಾಣಿ ಗೌಳಿ, ವೀರಯ್ಯ ಹಿರೇಮಠ್, ಸುಗಯ್ಯ ಗಂಟಿ ಮಠ, ರಮೇಶ್ ಮಹೇಂದ್ರಕರ್ ಉಪಸ್ಥಿತರಿದ್ದರು. ಗೌರಿ ಹಾಗೂ ರಿತಿಕಾ ನಿರೂಪಿಸಿದರು. ತನಾಜ್ ಸ್ವಾಗತಿಸಿದರು. ಸೀಮಾ ವಂದಿಸಿದರು.

ಜ.21ರಂದು ಅಂಬಿಗರ ಚೌಡಯ್ಯ ಜಯಂತಿ ಆಚರಣೆ



ಚಿತ್ತಾಪುರ,ಜ.18-

ತಾಲೂಕು ಆಡಳಿತದ ವತಿಯಿಂದ ಜ.21ರಂದು ಹಮ್ಮಿಕೊಳ್ಳಲಾಗುವ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಕಾರ್ಯಕ್ರಮವನ್ನು ಸರ್ಕಾರದ ಶಿಷ್ಟಾಚಾರದಂತೆ ಯಾವುದೇ ಲೋಪವಾಗದಂತೆ ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಪಿಎಲ್ಡಿ ಬ್ಯಾಂಕ್ ಅಧ್ಯಕ್ಷ ಭೀಮಣ್ಣ ಸಾಲಿ ತಿಳಿಸಿದರು.

ಪಟ್ಟಣದ ಪ್ರಜಾ ಸೌಧದ ಸಭಾಂಗಣದಲ್ಲಿ ಜರುಗಿದ ಜಯಂತಿ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ಈ ಬಾರಿ ಸಮಾಜದ ಮುಖಂಡರೆಲ್ಲರೂ ಒಗ್ಗೂಡಿ ಜಯಂತಿ ಆಚರಿಸಲು ನಿರ್ಧರಿಸಿದ್ದು, ಆಮಂತ್ರಣ ಪತ್ರಿಕೆಯಲ್ಲಿ ಸಮಾಜದ ಮುಖಂಡರ ಹೆಸರುಗಳನ್ನು ಒಳಗೊಳ್ಳುವಂತೆ ಮನವಿ ಮಾಡಿದರು.

ಯುವ ಮುಖಂಡ ಶಿವಕುಮಾರ ಸುಣಗಾರ ಮಾತನಾಡಿ, ಅಂಗನವಾಡಿ ಹಾಗೂ ಆರೋಗ್ಯ ಕೇಂದ್ರಗಳಲ್ಲಿ ಜಯಂತಿ ಆಚರಣೆಯನ್ನು ನಿರ್ಲಕ್ಷಿಸಲಾಗುತ್ತಿದೆ. ತಾಲೂಕು ಮಟ್ಟದ ಅಧಿಕಾರಿಗಳು ಎಲ್ಲಾ ಇಲಾಖೆಗಳಲ್ಲಿ ಜಯಂತಿ ಆಚರಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು ಎಂದು ಆಗ್ರಹಿಸಿದರು.

ಮಲ್ಲಿಕಾರ್ಜುನ ಅಲ್ಲೂರಕರ್ ಮಾತನಾಡಿ, ಕಳೆದ ವರ್ಷದ ಲೋಪದೋಷಗಳು ಮರುಕಳಿಸದಂತೆ ನೋಡಿಕೊಳ್ಳಬೇಕು ಎಂದರು.

ತಹಶೀಲ್ದಾರ್ ನಾಗಯ್ಯ ಹಿರೇಮಠ ಮಾತನಾಡಿ, ಸಮಾಜದ ಮುಖಂಡರ ಸಲಹೆಗಳನ್ನು ಸ್ವೀಕರಿಸಲಾಗಿದ್ದು, ಜ. 21ರಂದು ಬೆಳಿಗ್ಗೆ 10 ಗಂಟೆಗೆ ಪ್ರಜಾ ಸೌಧದ ಆವರಣದಲ್ಲಿ ತಾಲೂಕು ಮಟ್ಟದ ಜಯಂತಿ ಕಾರ್ಯಕ್ರಮ ನಡೆಯಲಿದೆ. ಅಂದು ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಭಾವಚಿತ್ರ ಪೂಜೆ ನೆರವೇರಿಸಿ, ಮುಖ್ಯ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಮುಹಮ್ಮದ್ ಅಕ್ರಂ ಪಾಷಾ, ಗ್ರೇಡ್ 2 ತಹಶೀಲ್ದಾರ್ ರಾಜಕುಮಾರ್ ಮರತೂರಕರ್, ಪಿಎಸ್ಐ ಮಂಜುನಾಥ ರೆಡ್ಡಿ, ಪಶು ವೈದ್ಯಾಧಿಕಾರಿ ಡಾ.ಶಂಕರ ಕಣ್ಣಿ, ಕೋಲಿ ಸಮಾಜದ ತಾಲೂಕು ಅಧ್ಯಕ್ಷರಾದ ಶಿವಕುಮಾರ ಯಾಗಾಪೂರ, ನಿಂಗಣ್ಣ ಹೆಗಲೇರಿ, ತಾಲೂಕು ಯುವ ಅಧ್ಯಕ್ಷ ರಾಜೇಶ್ ಹೊಳಿಕಟ್ಟಿ, ಮುಖಂಡರಾದ ಭೀಮಣ್ಣ ಸೀಬಾ, ಸಂತೋಷ ಇವಣಿ, ರಾಮಲಿಂಗ ಬಾನರ, ಕಾಶಪ್ಪ ಡೋಣಗಾಂವ, ಜೈಗಂಗಾವಾಡಿ, ತಮ್ಮಣ್ಣ ಡಿಗ್ಗಿ, ಶರಣಪ್ಪ ನಾಟೀಕಾರ, ಬಸವರಾಜ ಚಿನ್ನಮಳ್ಳಿ, ದಶರಥ ದೊಡ್ಡಮನಿ, ಶರಣು ಅರಣಕಲ್, ಭಾಗಣ್ಣ ಹಲಕಟ್ಟಿ, ಸಾಬಣ್ಣ ಡಿಗ್ಗಿ, ಅರುಣ ಯಾಗಾಪೂರ, ಸಾಬಣ್ಣ ಭರಾಟೆ, ಮದನ್ ಯಾಗಾಪೂರ, ಆನಂದ್ ಯರಗಲ್, ಮಲ್ಲಿಕಾರ್ಜುನ ಸಂಗಾವಿ, ನಾಗರಾಜ ಸಂಗಾವಿ ಸೇರಿದಂತೆ ಇತರರು ಇದ್ದರು.

ಸಂವಿಧಾನದ ಅಡಿಯಲ್ಲೇ ನಿಮಗೆ ಪಾಠ ಕಲಿಸುತ್ತೇವೆ : ಶಾಸಕ ಭರತ್ ರೆಡ್ಡಿಗೆ ಛಲವಾದಿ ನಾರಾಯಣಸ್ವಾಮಿ ತಿರುಗೇಟು

ಬಳ್ಳಾರಿ,ಜ.18-

ಗಾಲಿ ಜನಾರ್ಧನ ರೆಡ್ಡಿಯವರ ಮನೆ ಸುಟ್ಟು ಭಸ್ಮ ಮಾಡಲು ನನಗೆ ಐದು ನಿಮಿಷ ಸಾಕು ಎಂದು ಹೇಳಿಕೆ ನೀಡಿರುವ ಶಾಸಕ ಭರತ್ ರೆಡ್ಡಿ ಅವರ ಮಾತುಗಳು ಒಬ್ಬ ಜನಪ್ರತಿನಿಧಿಗೆ ಶೋಭೆ ತರುವುದಿಲ್ಲ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ಸರ್ಕಾರದ ವಿರುದ್ಧ ಬಳ್ಳಾರಿಯಲ್ಲಿ ಬಿಜೆಪಿ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನಾ ಸಮಾವೇಶದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಬಳ್ಳಾರಿಯಲ್ಲಿ ಎಂತಹ ಭಸ್ಮಾಸುರನಿಗೆ ಜನ್ಮ ನೀಡಿದ್ದೀರಿ? ಜನಾರ್ಧನ ರೆಡ್ಡಿಯವರನ್ನು ಮುಗಿಸಿಬಿಡುವುದಾಗಿ ಹೇಳಲು ನಿಮಗೇನು ಅಷ್ಟು ತಾಕತ್ತಿದೆಯೇ? ಎಂದು ಸವಾಲು ಹಾಕಿದ ಅವರು, ನಾವು ಯಾವುದಕ್ಕೂ ಹೆದರುವವರಲ್ಲ. ನಿಮ್ಮಂತೆ ನಾವು ದುಂಡಾವರ್ತಿ ಮಾಡುವುದಿಲ್ಲ, ಬದಲಾಗಿ ಡಾ. ಬಾಬಾಸಾಹೇಬ್ ಅಂಬೇಡ್ಕರ ಅವರು ನೀಡಿದ ಸಂವಿಧಾನದ ಅಡಿಯಲ್ಲೇ ನಿಮಗೆ ಪಾಠ ಕಲಿಸುತ್ತೇವೆ, ಎಂದು ಎಚ್ಚರಿಸಿದರು.

ಇದೇ ಸಂದರ್ಭದಲ್ಲಿ ಮಾಜಿ ಸಚಿವ ಜನಾರ್ಧನ ರೆಡ್ಡಿ ಹಾಗೂ ಶ್ರೀರಾಮುಲು ಅವರಿಗೆ ಕಿವಿಮಾತು ಹೇಳಿದ ಛಲವಾದಿ, ಕೋಪ ಮಾಡಿಕೊಂಡು ಮೂಗು ಕೊಯ್ದುಕೊಂಡರೆ ಅದು ಮತ್ತೆ ಬೆಳೆಯುವುದಿಲ್ಲ.

ಮಾಜಿ ಸಚಿವ ಭೀಮಣ್ಣ ಖಂಡ್ರೆಗೆ ಶ್ರದ್ಧಾಂಜಲಿ



ಆಳಂದ ,ಜ.18-

ಶುಕ್ರವಾರ ಸಂಜೆ ನಿಧನರಾದ ಮಾಜಿ ಸಚಿವ ಭೀಮಣ್ಣ ಖಂಡ್ರೆ ಅವರಿಗೆ ವೀರಶೈವ ಲಿಂಗಾಯತ್ ಮಹಾಸಭಾ ತಾಲೂಕು ಘಟಕದ ಆಶ್ರಯದಲ್ಲಿ ಸಮಾಜ ಬಾಂಧವರು ಶನಿವಾರ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.

ಪಟ್ಟಣದ ಬಸ್ ನಿಲ್ದಾಣ ಬಳಿಯ ವೀರಶೈವ ಲಿಂಗಾಯತ ಮಹಾಸಭಾ ಪ್ರಾಂಗಣದಲ್ಲಿನ ವಿಶ್ವಗುರು ಬಸಣ್ಣಣವರ ಪ್ರತಿಮೆ ಬಳಿ ಲಿಂ. ಭೀಮಣ್ಣ ಖಂಡ್ರೆ ಅವರ ಭಾವಚಿತ್ರಕ್ಕೆ ಪೂಜೆ ನೆರವೇರಿಸಿ ಪುಷ್ಪನಮನ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಭೀಮಣ್ಣ ಖಂಡ್ರೆ ಅವರ ವ್ಯಕ್ತಿತ್ವನ್ನು ಸ್ಮರಿಸಿದ ಮುಖಂಡರು, ಆಳಂದ ತಾಲೂಕಿನ ಸಮಾಜಿಕ, ರಾಜಕೀಯವಾಗಿ ಬಹು ಹತ್ತಿರದ ನಂಟು ಹೊಂದಿದ್ದರು. ಅವರ ಜನಪರ ಮತ್ತು ಸಮಾಜಪರ ಕಾಳಜಿಯುಳ್ಳ ನಾಯಕತ್ವದೊಂದಿಗೆ ಯುವ ಸಮುದಾಯಕ್ಕೆ ಮಾದರಿ ವ್ಯಕ್ತಿತ್ವನ್ನು ಬಿಟ್ಟುಕೊಟ್ಟಿದ್ದಾರೆ. ಅವರ ಅಗಲಿಕೆಗೆ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಉಪಾಧ್ಯಕ್ಷ ಶ್ರೀಶೈಲ ಖಜೂರಿ ಮತ್ತು ಸಿದ್ದು ಪಾಟೀಲ ಮೋಘಾ, ನ್ಯಾಯವಾದಿ ಮಹಾದೇವ ಹತ್ತಿ ಅವರು ಹೇಳಿದರು.

ಮಹಾಸಭಾ ಕಾರ್ಯದರ್ಶಿ ಕಲ್ಲಪ್ಪ ಹತ್ತರಕಿ, ಹಿರಿಯ ಮುಖಂಡ ಮಲ್ಲಪ್ಪ ಹತ್ತರಕಿ, ಮಲ್ಲಿಕಾರ್ಜುನ ಕಂದಗುಳೆ, ಶ್ರೀಶೈಲ ಹತ್ತರಕಿ, ಬಸವಸೇನೆ ತಾಲೂಕು ಅಧ್ಯಕ್ಷ ಲಿಂಗರಾಜ ಪಾಟೀಲ, ಮಾಳಿ ಸಮಾಜ ಅಧ್ಯಕ್ಷ ಪಂಡಿತ ಶೇರಿಕಾರ, ವಿಎಸ್‌ಎಸ್‌ಎನ್ ಅಧ್ಯಕ್ಷ ಭಾರತ ಪಾಟೀಲ, ಭೂವಿ ಸಮಾಜದ ಕನಕಪ್ಪ ದಂಡಗುಲೆ, ಪಿಎಲ್ಡಿ ಬ್ಯಾಂಕ್ ನಿರ್ದೇಶಕ ಶರಣಬಸಪ್ಪ ವಾಡೆ, ಪಂಚಮಸಾಲಿ ಸಮಾಜ ಅಧ್ಯಕ್ಷ ಆನಂದ ಎಸ್. ದೇಶಮುಖ, ಸಂತೋಷ ವಾಲೆ, ಬಾಬುರಾವ್ ಗೊಬ್ಬರೆ ಭೂಸನೂರ, ಚನ್ನಪ್ಪ ಹತ್ತರಕಿ, ರಾಮು ಹತ್ತರಕಿ, ಸಿದ್ದು ಶೇಖಾಪೂರ, ಶಿವರಾಯ ಸರಸಂಬಿ ಮತ್ತಿತರು ಉಪಸ್ಥಿತರಿದ್ದು ಖಂಡ್ರೆ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ಗಣ್ಯರ ಸಂತಾಪ : ಶತಾಯುಷಿ ಭೀಮಣ್ಣ ಖಂಡ್ರೆ ಅವರ ಅಗಲಿಕೆಗೆ ಶಾಸಕ ಬಿ.ಆರ್.ಪಾಟೀಲ್, ಮಾಜಿ ಶಾಸಕ ಸುಭಾಷ ಗುತ್ತೇದಾರ್, ಕೃಷಿಕ ಸಮಾಜ ಅಧ್ಯಕ್ಷ ಗುರುಶರಣ ಪಾಟೀಲ ಕೊರಳಿ, ಪಂಚಗ್ಯಾರಂಟಿ ಅಧ್ಯಕ್ಷ ಶಿವಪುತ್ರಪ್ಪ ಪಾಟೀಲ, ಜೆಡಿಎಸ್ ನಾಯಕಿ ಮಹೇಶ್ವರಿ ವಾಲಿ, ಹೋರಾಟಗಾರ ರಮೇಶ ಲೋಹಾರ, ಪುರಸಭೆ ಮಾಜಿ ಅಧ್ಯಕ್ಷ ವಿಠ್ಠಲರಾವ್ ಪಾಟೀಲ, ಡಿಸಿಸಿ ನಿರ್ದೇಶಕ ಅಶೋಕ ಸಾವಳೇಶ್ವರ, ಕಿಸಾನಸಭಾ ರಾಜ್ಯ ಕಾರ್ಯಾಧ್ಯಕ್ಷ ಮೌಲಾ ಮುಲ್ಲಾ, ಬಂಜಾರಾ ಸಮಾಜದ ರಾಜು ಚವ್ಹಾಣ, ಸುಭಾಷ ಫೌಜಿ, ಗುತ್ತಿಗೆದಾರ ರೇವಣಸಿದ್ದಪ್ಪ ನಾಗೂರೆ, ಅಖಿಲ ಕರ್ನಾಟಕ ದಲಿತ ಸೇನೆ ರಾಜ್ಯಾಧ್ಯಕ್ಷ ದತ್ತಾತ್ರೆಯ ಕುಡಕಿ, ಬಾಬುರಾವ್ ಅರುಣೋದಯ, ಹಿರಿಯ ದಯಾನಂದ ಶೇರಿಕಾರ, ಬಿಜೆಪಿ ಮುಖಂಡ ಅಶೋಕ ಹತ್ತರಕಿ, ಬಸವರಾಜೇಂದ್ರ ಗುಂಡೆ ಸೇರಿದಂತೆ ಅನೇಕರು ಸಂತಾಪ ವ್ಯಕ್ತಪಡಿಸಿದ್ದಾರೆ.

ವ್ಯಕ್ತಿತ್ವ ವಿಕಸನದತ್ತ ಗಮನ ಹರಿಸಬೇಕು: ಪ್ರೊ ವಿಜಯಾ ಬಿ. ಕೋರಿಶೆಟ್ಟಿ



ಬಾಗಲಕೋಟೆ,ಜ.18-

ಅವರು ಶುಕ್ರವಾರ ನಗರದ ಬಿವಿವಿಎಸ್ ಕ್ಯಾಂಪಸ್ನಲ್ಲಿ ಆಯೋಜಿಸಲಾಗಿದ್ದ ಕ.ರಾ.ಅ.ಮ.ವಿ.ವಿ. ವಿಜಯಪುರ ಹಾಗೂ ದಾನಮ್ಮದೇವಿ ಮಹಿಳಾ ಕಾಲೇಜು ಸಹಯೋಗದಲ್ಲಿ ಅಂತರ ಮಹಿಳಾ ಕಾಲೇಜಗಳ ಮೂರು ದಿನಗಳ ಯುವಜನೋತ್ಸವ 2025-26ರ 20ನೇ ಶಕ್ತಿ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ರಾಜ್ಯದ ವಿವಿಧ ಭಾಗಗಳಿಂದ 25ಕ್ಕೂ ಹೆಚ್ಚು ಕಾಲೇಜಗಳು 1200ಕ್ಕೂ ಅಧಿಕ ವಿದ್ಯಾರ್ಥಿನಿಯರು ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಲು ಹೆಸರನ್ನು ನೋಂದಣಿ ಮಾಡಿಕೊಂಡಿದ್ದಾರೆ ಎಂದರು.

ಕ.ರಾ.ಅ.ಮ.ವಿ.ವಿ ವಿಶ್ರಾಂತ ಕುಲಪತಿ ಪ್ರೊ ಮೀನಾ ಚಂದಾವರಕರ ಮಾತನಾಡಿ, ಇಂದಿನ ಒತ್ತಡದ ಜೀವನದಲ್ಲಿ ಉಲ್ಲಾಸದಿಂದ ಇರಬೇಕಾದರೆ ವಿದ್ಯಾರ್ಥಿನಿಯರು ತಮ್ಮ ಕಲಿಕೆಯ ಜೊತೆಗೆ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ಆನಂದಿಸಬೇಕು, ಸೃಜನಾತ್ಮಕ ಕೌಶಲಾಧಾರಿತ ಕಲೆಯನ್ನು ಬೆಳೆಸಿಕೊಳ್ಳಬೇಕೆಂದು ಹೇಳಿ, ಎಲ್ಲ ಕಾಲೇಜುಗಳ ವಿದ್ಯಾರ್ಥಿಗಳು ಇಂತಹ ಸ್ಪರ್ಧೆಯಲ್ಲಿ ಭಾಗವಹಿ ಸುವಂತೆ ಅವರನ್ನು ಪ್ರೇರಿಪಿಸಬೇಕೆಂದರು.

ಕ.ರಾ.ಅ.ಮ.ವಿ.ವಿ ಕುಲಸಚಿವ (ಆಡಳಿತ) ಶಂಕರಗೌಡ ಸೋಮನಾಳ ಮಾತನಾಡಿದರು.

ಬಾಗಲಕೋಟೆ ಬಿವಿವಿ ಸಂಘದ ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ ಅಧ್ಯಕ್ಷತೆ ವಹಿಸಿ ಮಾತನಾಡಿ,

ಸಂಸ್ಥೆ ವ್ಯಾಪ್ತಿಯಲ್ಲಿ 184 ಅಂಗ ಸಂಸ್ಥೆಗಳಿವೆ, ಯುಜಿ ಟು ಪಿಜಿಗಳಲ್ಲದೆ ಎಂಜನಿಯರಿಂಗ್, ಮೆಡಿಕಲ್, ಬಿಬಿಎ, ಎಂಬಿಎ ಸೇರಿದಂತೆ ವಿವಿಧ ತರಬೇತಿ ಕೇಂದ್ರಗಳ ಮೂಲಕ 50 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಲಾಗುತ್ತದೆ. 35 ಹಾಸ್ಟೆಲ್, 200 ಸ್ಕೂಲ್ ಬಸ್, 6 ಸಾವಿರ ಶಿಕ್ಷಕರು ಇದ್ದಾರೆ. ಒಟ್ಟಾರೆ ವಿ.ವಿ. ಮಾಡುವ ಕೆಲಸವನ್ನು ನಮ್ಮ ಸಂಸ್ಥೆ ಮಾಡುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಕ.ರಾ.ಅ.ಮ.ವಿ.ವಿ. ದ ವಿದ್ಯಾರ್ಥಿನಿ ಕ್ಷೇಮಪಾಲನ ನಿರ್ದೇಶಕಿ ಪ್ರೊ.ಜ್ಯೋತಿ ಉಪಾಧ್ಯೆ ಪ್ರಾಸ್ತಾವಿಕ ವಾಗಿ ಮಾತನಾಡಿದರು, ಕ.ರಾ.ಅ.ಮ.ವಿ.ವಿ ಡೀನ್, ಶಿಕ್ಷಣ ನಿಕಾಯ ಹೂವಣ್ಣ ಸಕ್ವಾಲ್ ಸಂದೇಶ ವಾಚನ ಮಾಡಿದರು,

ದಾನಮ್ಮದೇವಿ ಮಹಿಳಾ ಕಾಲೇಜಿನ ಪ್ರಾಚಾರ್ಯ ಪ್ರೊ.ಎಂ.ಎಂ. ಹಿರೇಮಠ ಸ್ವಾಗತಿಸಿದರು, ಪ್ರೊ.ಎ.ಎನ್. ಬಾಗೇವಾಡಿ ಅತಿಥಿಗಳನ್ನು ಪರಿಚಯಿಸಿದರು, ಮಲ್ಲಿಕಾರ್ಜುನ ಎಂ ಮತ್ತು ಪ್ರೊ.ಎ.ಸಿ.ಕೆರೂರ ನಿರೂಪಿಸಿದರು, ಪ್ರೊ. ಎಸ್.ಬಿ.ಕಬ್ಬಿಣದ ವಂದಿಸಿದರು, ಅಕ್ಷತಾ ಹಾಗೂ ದೀಪಾ ಸಂಗಡಿಗರು ಪ್ರಾರ್ಥನೆ ಹೇಳಿದರು, ಸುರೇಖಾ ದಳವಾಯಿ ಹಾಗೂ ಸಂಗಡಿಗರು ಮಹಿಳಾ ಗೀತೆ ಹೇಳಿದರು.

ವಿವಿಧ ಕಾಲೇಜುಗಳಿಂದ ಆಗಮಿಸಿದ್ದ ವಿದ್ಯಾರ್ಥಿನಿಯರ ಆಕರ್ಷಕ ಕಲಾತಂಡವು ನಗರದ ಪ್ರಮುಖ ಬೀದಿಯಲ್ಲಿ ಮೆರವಣಿಗೆ ನಡೆಯಿತು.

ಅಧಿಕಾರ ಶಾಶ್ವತವಲ್ಲ, ಜನರ ಪ್ರೀತಿಯೇ ಮುಖ್ಯ : ಶಾಸಕ ಗಣೇಶ್

ಕಂಪ್ಲಿ,ಜ.18-

ಕಂಪ್ಲಿಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ (ಆಉಣ) ಕಚೇರಿಯ ಅವಶ್ಯಕತೆ ಇರುವುದನ್ನು ಮನಗಂಡು ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರೊಂದಿಗೆ ಸುದೀರ್ಘ ಚರ್ಚೆ ನಡೆಸಲಾಗಿದೆ. ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಶೀಘ್ರವೇ ಕಚೇರಿ ಮಂಜೂರು ಮಾಡುವ ಭರವಸೆ ನೀಡಿದ್ದಾರೆ ಎಂದು ಶಾಸಕ ಜೆ.ಎನ್. ಗಣೇಶ್ ಹೇಳಿದರು.



ಪಟ್ಟಣದ ವೀರಶೈವ ಭವನದಲ್ಲಿ ಶುಕ್ರವಾರ ಶಿಕ್ಷಣ ಇಲಾಖೆ, ಕುರುಗೋಡು ಬಿಇಒ ಕಚೇರಿ ಹಾಗೂ ವಿವಿಧ ಶಿಕ್ಷಕರ ಸಂಘಟನೆಗಳ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ಸಾವಿತ್ರಿಬಾಯಿ ಫುಲೆ ಅವರ ಜಯಂತ್ಯೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮೊದಲ ಬಾರಿಗೆ ಶಾಸಕನಾದಾಗ ಕ್ಷೇತ್ರದಲ್ಲಿ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಹಲವು ಸಮಸ್ಯೆಗಳಿದ್ದವು. ನಂತರದ ದಿನಗಳಲ್ಲಿ ಹೆಚ್ಚಿನ ಅನುದಾನ ಬಳಸಿಕೊಂಡು ಶೈಕ್ಷಣಿಕ ಬದಲಾವಣೆ ಹಾಗೂ ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ನಡೆಸಿದ್ದೇನೆ. ಶಿಕ್ಷಕರು ಹಾಗೂ ಸರ್ಕಾರಿ ನೌಕರರ ಭವನದ ಬೇಡಿಕೆಯನ್ನು ಆದಷ್ಟು ಬೇಗ ಈಡೇರಿಸಲಾಗುವುದು ಎಂದು ಅವರು ಆಶ್ವಾಸನೆ ನೀಡಿದರು.

ಅಧಿಕಾರ ಎನ್ನುವುದು ಶಾಶ್ವತವಲ್ಲ, ಜನರೊಂದಿಗೆ ನಾವು ಗಳಿಸುವ ಪ್ರೀತಿ ಮತ್ತು ವಿಶ್ವಾಸ ಮಾತ್ರ ಕೊನೆಯವರೆಗೂ ಉಳಿಯುತ್ತದೆ ಎಂದು ಅವರು ಅಭಿಪ್ರಾಯಪಟ್ಟರು. ಇದೇ ಸಂದರ್ಭದಲ್ಲಿ ವಿವಿಧ ಸಾಧಕ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ನಂತರ ನಿವೃತ್ತ ಶಿಕ್ಷಕರಾದ ವಿರೇಶ, ಎಲೆಗಾರ ಪಾರ್ವತಿ, ಶೀಲಾವತಿ, ಸರ್ವಮಂಗಳ, ರಾಘವೇಂದ್ರ, ಹುಲಿಕುಂಟಾಚಾರ ಹಾಗು ಇ. ಶಾಂತ ಗಡ್ಡಾದ್, ನಾಗವೇಣಿ, ಎನ್.ಲೋಕೇಶ, ಮರಿಸ್ವಾಮಿ, ಮುದುಕಪ್ಪ, ಬಸವನಗೌಡ, ವೆಂಕಟರಮಣ, ಗಾದಿಲಿಂಗಪ್ಪ, ಹೊಸಗೇರಪ್ಪ, ವೈ. ಎಂ. ಈರಮ್ಮ, ಸಂಗನಗೌಡ ಗೌಡರ, ವಿರೇಶ, ಈರಮ್ಮ, ನರಸಿಂಹಲು, ಎಸ್.ಚಂದ್ರಪ್ಪ, ಶೃತಿಕುಮಾರಿ, ರಂಗಪ್ಪ, ಮಡಿವಾಳಪ್ಪ, ಎನ್. ಶಿವಕುಮಾರ, ಕೆ. ಮೌನೇಶ, ಎಸ್. ಭವ್ಯಶ್ರೀ, ಪ್ರಶಸ್ತಿ ಪುರಸ್ಕೃತರಾದ ಲಕ್ಷ್ಮಿಕಾಂತ ಬಣಕಾರ, ಸದ್ಯೋಜಾತಪ್ಪ, ಅನ್ನದಾನೇಶ್, ರೇಣುಕಾದೇವಿ, ಸುನೀತಾ ಕುಮಾರಿ, ಶ್ಯಾಮಲಾ ಪಿ. ಜೆ. ವಿರೇಶ ಕೆ., ಮೇಲಾರೆಡ್ಡಿ, ಜಬೀನಾ, ಬಿ. ಜಯಮ್ಮ, ಲಕ್ಕಪ್ಪ, ರಂಗಪ್ಪ ಕಟ್ಟಿಮನಿ, ಮಡಿವಾಳಪ್ಪ, ಶಾಬನ, ರೇಣುಕಾ ಆರ. ಎಚ್, ಪರಶುರಾಮ, ಬಿ. ಸಾವಿತ್ರಿ, ಪಿ. ಎನ್. ರಾಜಾಭಕ್ಷಿ, ವಿರುಪಾಕ್ಷಪ್ಪ, ಶ್ರೀ ವಿಜಯ ಇವರಿಗೆ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಬಿಇಒ ಸಿದ್ದಲಿಂಗಮೂರ್ತಿ, ಇಒ ಆರ್.ಕೆ.ಶ್ರೀಕುಮಾರ, ಎಡಿ ಮಲ್ಲನಗೌಡ ಕೆ.ಎಸ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಹನುಮಂತಪ್ಪ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಹೆಚ್.ದೊಡ್ಡಬಸಪ್ಪ, ಪ್ರಮುಖರಾದ ಪಿ.ನಾಗೇಶ್ವರರಾವ್, ಸಿ.ಆರ.ಹನುಮಂತ, ಲಿಂಗಪ್ಪ, ಟಿ.ಎಂ.ಬಸವರಾಜ, ರೇವಣ್ಣ, ಮಂಜುನಾಥ, ಯುಗಾದಿ ಶಿವರಾಜ, ಗಾದಿಲಿಂಗಪ್ಪ, ಜಡೆಪ್ಪ, ಸುಗ್ಗೇನಹಳ್ಳಿ ರಮೇಶ, ಬಸವರಾಜ ಪಾಟೀಲ್, ಸುಜಾತ ಸೇರಿದಂತೆ ಸಿಆರ್‌ಪಿಗಳು, ಖಾಸಗಿ ಆಡಳಿತ ಮಂಡಳಿಯ ಮುಖ್ಯಸ್ಥರು ಶಿಕ್ಷಕರು ಸೇರಿದಂತೆ ಇತರರು ಉಪಸ್ಥಿತರಿದ್ದರು.



ಅತಿವೃಷ್ಟಿಯಿಂದ ಬೆಳೆ ಹಾನಿ : ಹೆಚ್ಚಿನ ಪರಿಹಾರ ಒದಗಿಸುವಂತೆ ಕರವೇ ಆಗ್ರಹ

ಸೇಡಂ,ಜ.18-

2025-26ನೇ ಸಾಲಿನಲ್ಲಿ ಭಾರೀ ಮಳೆ, ಪ್ರವಾಹದಿಂದಾಗಿ ಹಾನಿಗೊಳಗಾದ ರೈತರಿಗೆ ಹೆಚ್ಚಿನ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು, ತಹಶೀಲ್ದಾರ ಅವರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ತಾಲೂಕಿನಲ್ಲಿ ಅತಿವೃಷ್ಟಿಯಿಂದಾಗಿ ರೈತರು ಬೆಳೆದ ತೊಗರಿ ಬೆಳೆಗಳು ಮಳೆ ನೀರಿನಲ್ಲಿ ಮುಳುಗಿ ಸಂಪೂರ್ಣ ಹಾಳಾಗಿವೆ, ಈಗಾಗಲೇ ಸರ್ಕಾರದಿಂದ ರೈತರಿಗೆ ಪರಿಹಾರ ಧನ ನೀಡಲಾಗಿದೆ. ಆದರೆ, ಅತಿವೃಷ್ಟಿಯಿಂದ ಇಳುವರಿ ತುಂಬಾ ಕಡಿಮೆ ಆಗಿದ್ದರಿಂದ ಹೆಚ್ಚಿನ ಪರಿಹಾರಧನ ಮಂಜೂರು ಮಾಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಅಧ್ಯಕ್ಷ ಮೌನೇಶ್ ಬೇನಕನಹಳ್ಳಿ, ಮಹಿಳಾ ಘಟಕ ತಾಲೂಕು ಅಧ್ಯಕ್ಷೆ ಶರಣಮ್ಮ, ರೈತ ಸಂಘ ಅಧ್ಯಕ್ಷ ಅಂಜುಕುಮಾರ ಬಿಲ್ಕುಲ್, ಉಪಾಧ್ಯಕ್ಷರಾದ ಬಸವರಾಜ ತಳವಾರ, ಸಂತೋಷ ನಮವಾರ, ಚೇತನ್ ಹಾಬಳಟಿ, ಶ್ರೀಶೈಲ್, ಸೈದಪ್ಪ, ನಾಗರಾಜ್, ಸುಮನ್, ರವಿಕುಮಾರ, ವಿಶ್ವನಾಥ್ ಉಡಗಿ ಸೇರಿದಂತೆ ಹಲವರು ಇದ್ದರು.

ಒಂದನೇಯ ಪುಟದಿಂದ

ಸರಕಾರಿ ನೌಕರರ ಸಂಘದ ವಿವಿಧ ಬೇಡಿಕೆಗಳಿಗೆ ಖಂಡಿತ ಸ್ಪಂದಿಸುತ್ತೇನೆ ; ಭೋಸರಾಜ್

ಮತ್ತು ಸೌಕರ್ಯಗಳನ್ನು ಒದಗಿಸಿದೆ. ಶೈಕ್ಷಣಿಕ ಹಿತಾದೃಷಿಯಿಂದ ಮೂಲಭೂತ ಸೌಕರ್ಯಗಳಿಗೆ ಒದಗಿಸಿದೆ ಅದರ ನೌಕರರ ಸೇವೆ ಅಪಾರ. ನಮ್ಮ ಸರ್ಕಾರವು ನಮ್ಮ ಭಾಗಕ್ಕೆ ಶೈಕ್ಷಣಿಕ, ಆರೋಗ್ಯ, ಇನ್ನೂ ಆನೇಕ ರೀತಿಯ ಸೌಕರ್ಯಗಳಿಗೆ ಅನುದಾನವನ್ನು ಈಗಾಗಲೇ ನೀಡಿದ್ದು ಈ ಎಲ್ಲಾ ಸಹಕಾರ ನೌಕರರ ಸಂಘದ ಪರಿಶ್ರಮದಿಂದ ಮಾತ್ರ ಸಾಧ್ಯ. ಮುಂದಿನ ದಿನಗಳಲ್ಲಿ ಸರಕಾರಿ ನೌಕರರ ಸಂಘದ ಭವನಕ್ಕೆ ನಿವೇಶನವನ್ನು ನೀಡಿ ಅನುದಾನವನ್ನು ನೀಡುತ್ತೇನೆ. ಹಾಗೂ ಸರಕಾರಿ ನೌಕರರ ವಿವಿಧ ಬೇಡಿಕೆಗಳಿಗೆ ಖಂಡಿತ ಸ್ಪಂದಿಸುತ್ತೇನೆ ಎಂದರು.

ನಂತರ ಶಾಸಕ ಜಿ.ಹಂಪಯ್ಯ ನಾಯಕ ಅವರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು ಸಿರವಾರ ತಾಲೂಕಿನ ಅಭಿವೃದ್ಧಿಗೆ ಸರಕಾರಿ ನೌಕರರ ಸಂಘದ ಸಹಕಾರ ಅತ್ಯಗತ್ಯವಾಗಿದೆ. ಬಡವರ ಕಣ್ಣೀರು ಒರೆಸುವ ನಮ್ಮ ಸರ್ಕಾರ. ಬಡವರ ನಾಡಿ ಮಿಡಿತವನ್ನು ಆಲಿಸುವ ಸರ್ಕಾರ. ಸರಕಾರಿ ಹುದ್ದೆಯು ಒಂದು ಗೌರವ ಸ್ಥಾನವನ್ನು ನೀಡಿದೆ. ಸರಕಾರಿ ನೌಕರರ. ಸಮಾಜದ ಕಣ್ಣಾಗಿ ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು. ನೌಕರರ ಸಂಘದ ಅಭಿವೃದ್ದಗೆ ಸಾದಾ ನಾನು ಶ್ರಮಿಸುತ್ತಿರುವ. ಅವರ ಬೇಡಿಕೆಯನ್ನು ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಈ ಸಂದರ್ಭದಲ್ಲಿ ಶ್ರೀ ಅಭಿನವ ಸೋಮನಾಥ ಶಿವಚಾರ್ಯ ಮಹಾಸ್ವಾಮಿಗಳು ನವಲಕಲ್, ಕ್ರೈಸ್ತ ಧರ್ಮದ ಗುರುಗಳಾದ ಆನಂದ ಕುಮಾರ್, ಇಸ್ಲಾಂ ಧರ್ಮದ ಗುರುಗಳಾದ ಮಹಮ್ಮದ್ ಮಂಜೂರು ಉಲ್ ಹಸನ್ ಖಾಜಿ, ನೌಕರರ ಸಂಘದ ಜಿಲ್ಲಾಧ್ಯಕ್ಷ ಕೃಷ್ಣ ಶಾವಂತಗೇರ, ತಾಲೂಕು ಅಧ್ಯಕ್ಷರಾದ ಆರೀಫ್ ಮೀಯಾ, ಸಿರವಾರ ಪ.ಪಂ.ಅಧ್ಯಕ್ಷ ವೈ.ಭೂಪನಗೌಡ, ಉಪಾಧ್ಯಕ್ಷ ಲಕ್ಷ್ಮೀ ಆದೆಪ್ಪ, ಮುಖ್ಯಾಧಿಕಾರಿ ಸುರೇಶ ಶೆಟ್ಟಿ, ಕವಿತಾಳ ಪ.ಪಂ.ಅಧ್ಯಕ್ಷ ರಾಜೇಶ್ವರಿ ತಿಪ್ಪಯ್ಯ ಸ್ವಾಮಿ, ವೈ.ಶರಣಯ್ಯ ನಾಯಕ, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ್ ದೊಡ್ಡಮನೆ, ಇಓ ಶಶಿಧರ್ ಸ್ವಾಮಿ, ಶರಣಬಸವ ಪಾಟೀಲ್, ಭಗಯ್ಯ ನಾಯಕ, ಸುರೇಶ ಕುರ್ಡಿ, ವಿ.ಎಸ್.ಎಸ್. ಅಧ್ಯಕ್ಷ ಚನ್ನಪ್ಪ ಚನ್ನೂರು, ಪದ್ಮನಾಭ ಗುಡಿ, ಮೌನೇಶ ಹೀರೆಹಣಗಿ, ಅಯ್ಯನಗೌಡ ಐರಡ್ಡಿ, ಲಕ್ಷ್ಮಣ ಯಾದವ್, ಪ್ರದೀಪ್ ಕುಮಾರ್, ಪಿ.ಪ್ರಸಾದ್ ಹಾಗೂ ಸಿರವಾರ ಸರಕಾರಿ ನೌಕರರ ಸಂಘದ ಎಲ್ಲಾ ಪದಾಧಿಕಾರಿಗಳು, ಇನ್ನೂ ಮುಂತಾದವರು ಉಪಸ್ಥಿತರಿದ್ದರು. ಉಪಸ್ಥಿತರಿದ್ದರು.

ಪುಸ್ತಕ ಭಂಡಾರದಿಂದ ಜ್ಞಾನ ವಿಕಸನ- ಶಿವಾನಂದ ಕೆಳಗಿಮನಿ

ಸಂಸ್ಕೃತಿಕ ಮತ್ತು ಜೀವನ ಶೈಲಿಯನ್ನು ಬದಲಿಸುತ್ತದೆ ಎಂದರು. ಪುಸ್ತಕಗಳು ಸಂಪ್ರದಾಯ ಇದ್ದಂತೆ ಹಾಗಾಗಿ ಪುಸ್ತಕಗಳಿಂದ ಮಾತ್ರ ಮಕ್ಕಳಿಗೆ ಉತ್ತಮ ಸಂಸ್ಕಾರ ಮತ್ತು ಸಂಸ್ಕೃತಿ ಕಲಿಸಲು ಸಾಧ್ಯವಾಗುತ್ತದೆ ಎಂದರು. ಪ್ರಸ್ತುತ ಕಾಲಘಟ್ಟದಲ್ಲಿ ಪುಸ್ತಕಗಳು ಉಳಿಸುವ ಬೆಳೆಸುವ ಕಾರ್ಯ ಮಾಡಬೇಕಾಗಿದೆ. ಮಾರುತಿ ಬಡೇಗಾರ ಅವರು ಪುಸ್ತಕ ಸಂತೆ ಕಾರ್ಯಕ್ರಮವನ್ನು ಆಯೋಜನೆ ಮಾಡುವ ಮೂಲಕ ಪುಸ್ತಕ ಭಂಡಾರ ಹೆಚ್ಚಿಸಿದೆ. ಇವರ ಕಾರ್ಯ ಶ್ಲಾಘನೀಯ ಎಂದರು. ಪ್ರತಿಯೊಬ್ಬರ ಮನೆಯಲ್ಲಿ ಪುಸ್ತಕಗಳು ಇರಬೇಕು. ಪುಸ್ತಕ ಇರುವ ಮನೆಯ ಎಂದಿಗೂ ಸಂಸ್ಕೃತಿ ಪರಂಪರೆಯನ್ನು ಹೊಂದಿರುತ್ತದೆ ಎಂದರು. ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಂಡಿರುವ ವ್ಯಕ್ತಿ ಜ್ಞಾನ ಶಕ್ತಿ ಹೊಂದಿರುತ್ತಾನೆ ಎಂದರು.ಪುಸ್ತಕ ಸಂಸ್ಕೃತಿಯನ್ನು ಬೆಳೆಸುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದರು.

ಶ್ರೀ ಮಾದಾರ ಚನ್ನಯ್ಯ ಸೇವಾ ಸಮಿತಿ ರಾಯಚೂರು ನಗರ ಅಧ್ಯಕ್ಷರಾಗಿ ಮಂಚಾಲ್ ಭೀಮಣ್ಣ ಆಯ್ಕೆ

ಆಯ್ಕೆ ಮಾಡಿ ಘೋಷಣೆ ಮಾಡಿದರು.

ಸೇವಾ ಸಮಿತಿಯ ರಾಜ್ಯ ಗೌರವ ಸಲಹೆಗಾರರಾದ ರವೀಂದ್ರ ಜಲ್ದಾರ್ ಇವರು ಪ್ರಾಸ್ತಾವಿಕವಾಗಿ ಮಾತನಾಡಿ ಶ್ರೀಮತದ ಸೇವಾ ಸಮಿತಿಯ ಕಾರ್ಯಯೋಜನೆ ಗಳು ಮುಂದಿನ ಚಟುವಟಿಕೆಗಳು ಹಾಗೂ ಬಲಿಷ್ಠ ಸಮಾಜ ನಿರ್ಮಿಸಲು ಸೇವಾ ಸಮಿತಿಯ ಪ್ರತಿಯೊಬ್ಬರು ಕಂಕಣ ಬದ್ಧರಾಗಿ ಕೆಲಸ ಮಾಡಬೇಕೆಂದು ಕರೆ ನೀಡಿದರು.

ಮುಖ್ಯ ಅತಿಥಿಗಳಾಗಿದ್ದ ರಾಜ್ಯ ಉಪಾಧ್ಯಕ್ಷ ರಾದ ಜೆ.ಎಂ. ವೀರೇಶ ಮಾತನಾಡಿ ಶ್ರೀಮಠ ಸ್ಥಾಪನೆಯ ಹಿನ್ನೆಲೆ ಪ್ರಸ್ತುತ ಶ್ರೀಮತದ ಸೇವಾ ಕಾರ್ಯಗಳು ಸೇವಾ ಸಮಿತಿಯ ಸ್ಥಾಪನೆಯ ಉದ್ದೇಶ ಮತ್ತು ಅನಿವಾರ್ಯತೆಯ ಬಗ್ಗೆ ವಿಸ್ತೃತವಾಗಿ ಸಭೆಗೆ ತಿಳಿಸಿದರು.

ಸೇವಾ ಸಮಿತಿಯ ಜಿಲ್ಲಾಧ್ಯಕ್ಷರಾದ ಜೆ.ಎಂ. ಮೌನೇಶ್ ನಗರ ಪದಾಧಿಕಾರಿಗಳು ಪಟ್ಟಿಯನ್ನು ಘೋಷಿಸಿ ನಗರ ವಿಧಾನಸಭಾ ಕ್ಷೇತ್ರದಲ್ಲಿ ಮಾದಿಗ ಸಮಾಜವನ್ನು ಸಂಘಟಿಸುವ ನಿಟ್ಟಿನಲ್ಲಿ ಸೇವಾ ಸಮಿತಿ ಕ್ರಿಯಾಶೀಲವಾಗಿ ಕೆಲಸ ಮಾಡುತ್ತಾ ಸಮಾಜಕ್ಕಾಗಿ ಎಲ್ಲರೂ ಕಂಕಣಬದ್ಧ ರಾಗಿ ಶ್ರಮವಹಿಸಿ ಕೆಲಸ ಮಾಡುತ್ತ ಶ್ರೀಮತದ ಆಶಯದಂತೆ ಸಮಾಜದ ಕಟ್ಟ ಕಡೆಯ ವ್ಯಕ್ತಿಗಳು ನಮ್ಮ ಸಮಾಜದ ಬಗ್ಗೆ ಜಾಗೃತಿ ಮೂಡಿಸಿ ಸಮಾಜವನ್ನು ಮುನ್ನೆಲೆಗೆ ತರುವ ನಿಟ್ಟಿನಲ್ಲಿ ಸರ್ವರು ಸಹಕರಿಸಬೇಕೆಂದರು.

ಸಭೆಯಲ್ಲಿ ರಾಯಚೂರು ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅಪೇಕ್ಷಿತ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಈರಣ್ಣ ಬೆಂಗಾಲಿಯವರ ಹಕ್ಕಿಗಳ ಛಾಯಾ ಚಿತ್ರ ಪ್ರದರ್ಶನ ಹಕ್ಕಿಗಳ ಮಾಹಿತಿ ಪ್ರಬೇಧಗಳ ಮಾಹಿತಿಗೆ ಛಾಯಾಚಿತ್ರ ಪೂರಕ

ಮಳಿಮಠ, ಈರಣ್ಣ ಕೋಸಗಿ, ಹಫಿಜುಲ್ಲಾ, ಬಶೀರ ಅಹ್ಮದ ಹೊಸಮನಿ, ಪ್ರಭಣ್ಣಗೌಡ, ಬಸವಂತರಾಯ ಪಾಟೀಲ, ಸಲಾವುದ್ದಿನ್, ಅಜಯ್, ಮುನಿಸ್ವಾಮಿ, ಯಲ್ಲಪ್ಪ ಮರ್ಚೆಡ್ ಸೇರಿದಂತೆ ಅಭಿಜ್ಞಾನ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಪಕ್ಷಿಗಳ ಫೋಟೋ ಪ್ರದರ್ಶನ ರವಿವಾರವೂ ಮುಂದುವರಿಯಲಿದೆ.

ಜನಾರ್ದನ ರೆಡ್ಡಿ, ಶ್ರೀರಾಮುಲು ಶಕ್ತಿ ಅಡಗಿಸಲು ಯಾರಿಂದಲೂ ಸಾಧ್ಯವಿಲ್ಲ : ಬಸವರಾಜ ಬೊಮ್ಮಾಯಿ



ಬಳ್ಳಾರಿ,ಜ.18-

ಮಾಜಿ ಸಚಿವರಾದ ಜನಾರ್ದನ ರೆಡ್ಡಿ ಹಾಗೂ ಶ್ರೀರಾಮುಲು ಅವರ ಶಕ್ತಿ ಅಡಗಿಸಲು ಯಾರಿಂದಲೂ ಸಾಧ್ಯವಿಲ್ಲ. ಭ್ರಷ್ಟ ಕಾಂಗ್ರೆಸ್ ಸರಕಾರವನ್ನು ಕಿತ್ತು ಹಾಕಲು ಬಿಜೆಪಿ ಹಳ್ಳಿ ಹಳ್ಳಿಗೆ ತೆರಳಿ ಹೋರಾಟ ನಡೆಸುತ್ತದೆ. ಜನಾರ್ದನ ರೆಡ್ಡಿ ಹಾಗೂ ಶ್ರೀರಾಮುಲು ಜೊತೆಗೆ ಬಿಜೆಪಿ ಯಾವಾಗಲೂ ಇರುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಬಳ್ಳಾರಿಯಲ್ಲಿ ಪೋಸ್ಟರ್ ಹಾಕುವ ವಿಚಾರದಲ್ಲಿ ನಡೆದ ಗಲಾಟೆ ವಿರೋಧಿಸಿ ನಡೆದ ಬೃಹತ್ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಬಳ್ಳಾರಿಯಲ್ಲಿ ಈ ಘಟನೆ ಆಗಲು ಎರಡು ಕಾರಣ ಜನಾರ್ದನ ರೆಡ್ಡಿ ಕೋರ್ಟಿನ ಆದೇಶದ ಪ್ರಕಾರ ಬಳ್ಳಾರಿಗೆ ಬಂದಿದ್ದರಿಂದ ತಮಗೆ ಉಳಿಗಾಲವಿಲ್ಲ ಎಂದು, ಜನಾರ್ದ ರೆಡ್ಡಿ ಮತ್ತು ಅವರ ಆತ್ಮೀಯ ಸ್ನೇಹಿತ ರಾಮುಲು ಒಂದಾಗಿದ್ದಾರೆ ಎಂದರೆ ಬಳ್ಳಾರಿಯ ಕಾಂಗ್ರೆಸ್ ನಾಯಕರ ಕುರ್ಚಿ ಅಲುಗಾಡುತ್ತಿದೆ. ರಾಮುಲು ವೇಗ, ಜನಾರ್ದನ ರೆಡ್ಡಿ ಶಕ್ತಿ, ಬೆಂಕಿ ಬಿರುಗಾಳಿ ಇದ್ದ ಹಾಗೆ. ಜನಾರ್ದನ ರೆಡ್ಡಿ, ರಾಮುಲು ಶಕ್ತಿ ಅಡಗಿಸಲು ಸಾಧ್ಯವಿಲ್ಲ ಎಂದು ಹೇಳಿದರು.

ಎಸ್ಟಿ ಮೀಸಲಾತಿ ಹೆಚ್ಚಳ :

ವಾಲ್ಮೀಕಿ ಜನಾಂಗ ಮೂವತ್ತು ವರ್ಷದಿಂದ ಮೀಸಲಾತಿ ಹೆಚ್ಚಳಕ್ಕೆ ಹೋರಾಟ ಮಾಡುತ್ತಾ ಬಂದಿತ್ತು. ಶೇ 3% ಮೀಸಲಾತಿಯನ್ನು 7% ಕ್ಕೆ ಹೆಚ್ಚಿಸುವಂತೆ ಕೇಳಿದರು. ನಾವು ಎಸ್ಟಿ ಸಮುದಾಯಕ್ಕೆ ಪ್ರತ್ಯೇಕ ಇಲಾಖೆ ಮಾಡಿದೆವು, ವಾಲ್ಮೀಕಿ ಸಮುದಾಯದ ಸ್ವಾಮಿಜಿ, ರಾಮುಲು ಪ್ರತಿಭಟನೆ ಮಾಡಿದರೆ ಕಾಂಗ್ರೆಸ್ ನವರು ಒಬ್ಬರೂ ಬರಲಿಲ್ಲ. ನಾನು ಸಿಎಂ ಆಗಿದ್ದಾಗ ಮಿಸಲಾತಿಯನ್ನಿ 3% ರಿಂದ 7% ಕ್ಕೆ ಹೆಚ್ಚಿಸಿದೆವು. ಇದರಿಂದ ಸಾವಿರಾರು ಮಕ್ಕಳಿಗೆ ಮೆಡಿಕಲ್, ಇಂಜಿನೀಯರಿಂಗ್ ಸಿಟು ಉದ್ಯೋಗ ಸಿಗುತ್ತಿದೆ. ಯಡಿಯೂರಪ್ಪ ಅವರ ನಾಯಕತ್ವ ದಿಂದ ಅದು ಸಾಧ್ಯವಾಗಿದೆ ಎಂದು ಹೇಳಿದರು.

ಮೃತ ರಾಜಶೇಖರ ಸಾವಿಗೆ ನ್ಯಾಯ ಕೊಡಿಸಲು ಬಿಜೆಪಿ ಹೋರಾಟ ಮಾಡುತ್ತದೆ. ಅಲ್ಲಿವರೆಗೂ ಬಿಜೆಪಿ ವಿಶ್ರಮಿಸುವುದಿಲ್ಲ. ಕಾಂಗ್ರೆಸ್ ಸರಕಾರ ತೆಗೆಯುವವರೆಗೂ ನಾವು ಹಳ್ಳಿಹಳ್ಳಿಗೆ ಹೋಗಿ ಭ್ರಷ್ಟ ಸರಕಾರವನ್ನು ಬೇರು ಸಮೇತ ಕಿತ್ತು ಹಾಕುತ್ತೇವೆ. ಬಳ್ಳಾರಿ ಅಭಿವೃದ್ಧಿ ಮಾಡಲು ಜನಾರ್ದನ ರೆಡ್ಡಿ, ರಾಮುಲು ಅವರ ಹಿಂದೆ ನಾವಿದ್ದೇವೆ ಎಂದು ಸಾರಲು ನಾವು ಬಂದಿದ್ದೇವೆ. ಇಷ್ಟು ದೊಡ್ಡ ಸಂಖ್ಯೆಯಲ್ಲಿ ಜನರು ಬಂದಿರುವುದಕ್ಕೆ ಕೋಟಿ ಕೋಟಿ ಧನ್ಯವಾದಗಳು ಎಂದು ಹೇಳಿದರು.



ಪರೀಕ್ಷಾ ಕೇಂದ್ರಗಳ ಸುತ್ತಲು ನಿಷೇಧಾಜ್ಞೆ ಜಾರಿ : ಡಿಸಿ ನಾಗೇಂದ್ರ ಪ್ರಸಾದ್ ಕೆ. ಆದೇಶ

ಬಳ್ಳಾರಿ,ಜ.18-

ನಗರದ 4 ಪರೀಕ್ಷಾ ಕೇಂದ್ರಗಳಲ್ಲಿ ದೆಹಲಿಯ ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿ ವತಿಯಿಂದ ಜ.18 ರಂದು ಆಲ್ ಇಂಡಿಯಾ ಸೈನಿಕ ಶಾಲೆಗಳ ಪ್ರವೇಶ ಪರೀಕ್ಷೆ-2026 ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಆವರಣವನ್ನು ಭಾರತೀಯ ನಾಗರೀಕ ಸುರಕ್ಷಾ ಸಂಹಿತಾ 2023 ರ ಕಲಂ 163 ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ನಿರ್ಭಂಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಆದೇಶಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತ ಮುತ್ತಲಿನ ಜೆರಾಕ್ಸ್ ಸೆಂಟರ್ ಮತ್ತು ಇಂಟರ್ನೆಟ್ ಸೆಂಟರ್‌ಗಳನ್ನು ಕಾರ್ಯನಿರ್ವಹಿಸದಂತೆ ಆದೇಶಿಸಿದ್ದು, ಆ ಪ್ರದೇಶದಲ್ಲಿ ಅನಧೀಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಪ್ರವೇಶ ನಿಷೇಧಿಸಲಾಗಿದೆ.

ಈ ಆದೇಶವು ಪರೀಕ್ಷೆಯ ಮೇಲ್ವಿಚಾರಣೆ ಕಾರ್ಯನಿರ್ವಹಿಸುವ ಸಿಬ್ಬಂದಿಯವರಿಗೆ ಅನ್ವಯಿಸುವುದಿಲ್ಲ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.



ದೇವದಾಸಿ ಪದ್ಧತಿ; ಜಾಗೃತಿ ಮೂಡಿಸಿ

ಬಳ್ಳಾರಿ,ಜ.18-

ತಾಲ್ಲೂಕಿನ ಉಚ್ಚಂಗಿದುರ್ಗದ ಯಾತ್ರಾನಿವಾಸದಲ್ಲಿ ಶನಿವಾರ ನಡೆದ ವಿವಿಧ ಇಲಾಖೆ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜನವರಿ 31ರಿಂದ ಫೆಬ್ರುವರಿ 2ರವರೆಗೆ ಭರತ ಹುಣ್ಣಿಮೆ ಆಚರಣೆ, ಮಾರ್ಚ್ 17ರಿಂದ 22ರವರೆಗೆ ಯುಗಾದಿ ಹಬ್ಬದ ವೇಳೆ ದೇವಿ ಜಾತ್ರೆ ಜರುಗಲಿದೆ. ಎರಡು ಆಚರಣೆ ಸಂದರ್ಭದಲ್ಲಿ ಉಚ್ಚಂಗಿದುರ್ಗ ಗುಡ್ಡದ ಮೇಲೆ ಮತ್ತು ಹಾಲಮ್ಮನ ತೋಪಿನಲ್ಲಿ ಲಕ್ಷಾಂತರ ಭಕ್ತರು ಸೇರುತ್ತಾರೆ. ಕುಡಿಯುವ ನೀರು, ಶೌಚಾಲಯ, ರಸ್ತೆ ದುರಸ್ತಿ, ನಿರಂತರ ವಿದ್ಯುತ್ ಸಂಪರ್ಕ, ಪೊಲೀಸ್ ಬಂದೋಬಸ್ತ್, ವಾಹನ ನಿಲುಗಡೆಗೆ ವ್ಯವಸ್ಥೆ ಕಲ್ಪಿಸಬೇಕು' ಎಂದು ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಸೂಚಿಸಿದರು.

ಭಕ್ತರ ಅನುಕೂಲಕ್ಕಾಗಿ ಹೊಸಪೇಟೆ ಮತ್ತು ದಾವಣಗೆರೆಯಿಂದ ವಿಶೇಷ ಬಸ್ಸೌಲಭ್ಯ ಒದಗಿಸಬೇಕು. ಗುಡ್ಡದ ಮೆಟ್ಟಿಲು ಮಾರ್ಗದಲ್ಲಿ ಐದಾರು ಕಡೆಗೆ ನೀರಿನ ಸೌಕರ್ಯ ಇರಬೇಕು' ಎಂದರು.

ಉಪವಿಭಾಗಾಧಿಕಾರಿ ಸುರೇಶ್ ಕುಮಾರ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವೈ.ಎಚ್. ಚಂದ್ರಶೇಖರ, ಧಾರ್ಮಿಕ ದತ್ತಿ ಇಲಾಖೆಯ ಸಹಾಯಕ ಆಯುಕ್ತೆ ಸವಿತಾ, ತಹಶೀಲ್ದಾರ ಬಿ.ವಿ. ಗಿರೀಶ್ ಬಾಬು, ಡಿವೈಎಸ್ಪಿ ಸಂತೋಷ ಚೌವ್ಹಾಣ್, ಸಿಪಿಐ ಮಹಾಂತೇಶ ಸಜ್ಜನ್ ಇದ್ದರು.

ಸಮಾಜದ ಅಭಿವೃದ್ಧಿಗೆ ಸಂಶೋಧನೆ ಕಾರಣ: ಶಿವಶಂಕರ



ಬಾಗಲಕೋಟೆ,ಜ.18-

ಬಿವಿವಿ ಸಂಘದ ಹಾನಗಲ್ ಕುಮಾರೇಶ್ವರ ಔಷಧ ವಿಜ್ಞಾನ ಮಹಾವಿದ್ಯಾಲಯ, ಬಯೋ ಇನ್ನೋವೇಷನ್ ಸೆಂಟರ, ಲೈವಾನ್ ಬಯೋಲ್ಯಾಬ್ಸ್ ಹಾಗೂ ಬಿವಿಜಿ ಲೈಫ್ ಸೈನ್ಸ್ ಸಹಯೋಗದಲ್ಲಿ ಶುಕ್ರವಾರ ನಡೆದ ದಿ ಆರ್ಕಿಟೆಕ್ಚರ ಆಫ್ ರಿಸರ್ಚ್ ಲೈಫ್ಸೈಕಲ್' ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಭವಿಷ್ಯದ ಸಂಶೋಧನಾ ಚಟುವಟಿಕೆಗೆ ಇದು ಒಂದು ವೇದಿಕೆ ಆಗಲಿ. ಸಂಶೊಧನೆಗೆ ಪರಿಶೋಧನೆ, ವಿಶ್ಲೇಷಣೆ, ವಿನ್ಯಾಸ, ಅಭಿವೃದ್ಧಿ, ಪರೀಕ್ಷೆ, ಅನುಷ್ಠಾನ ಮತ್ತು ನಿರ್ವಹಣೆ ಮುಖ್ಯವಾಗಿವೆ, ಸಂಶೋಧನಾ ಪ್ರಬಂಧಗಳು ಸಮಾಜಕ್ಕೆ ಮತ್ತು ಸಮಾಜದ ಸುಧಾರಣೆಗೆ ಅವಶ್ಯಕವಾ ಗಿದೆ. ಸಂಶೋಧನೆಯು ಅತ್ಯುನ್ನತ ಮೌಲ್ಯ ಹೊಂದಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ ಮಾತನಾಡಿ, ಪ್ರಬಂಧ ಹೇಗೆ ಪ್ರಸ್ತುತ ಪಡಿಸುತ್ತೇವೆ ಎಂಬುದು ಹೆಚ್ಚು ಮುಖ್ಯವಾಗುತ್ತದೆ. ಪ್ರಬಂಧವು ಮೌಲ್ಯ ಒಳಗೊಂಡಿರಲಿ ಎಂದು ಹೇಳಿದರು.

ಡಾ.ವಿ.ಎಂ. ಚಂದ್ರಶೇಖರ ಮಾತನಾಡಿ, ಜ್ಞಾನ ವಿನಿಮಯ, ಕೌಶಲ ಅಭಿವೃದ್ಧಿ ಮತ್ತು ಸಂಶೋಧನೆಗೆ ಹೊಸ ದೃಷ್ಟಿಕೋನ ಒದಗಿಸುವಲ್ಲಿ ಕಾರ್ಯಾಗಾರ ಪ್ರಮುಖವಾಗಿದೆ ಎಂದರು. ಡಾ.ಜಿ. ಜಗದೀಶ, ಡಾ.ಬಾಲಾಕುಮಾರ ಪಿಚೈ, ಡಾ.ಶುಭದಾ ನಗರಕರ, ಡಾ.ರಾಜರಾಜಶೇಖರನ್, ಡಾ.ಮನೀಶ್ ಬರವಾಲಿಯಾ ವಿಶೇಷ ಉಪನ್ಯಾಸ ನೀಡಿದರು.

ಎಸ್.ನಿಜಲಿಂಗಪ್ಪ ವೈದ್ಯಕೀಯ ಕಾಲೇಜು ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ, ಪ್ರಾಚಾರ್ಯ ಡಾ.ವೈ. ಶ್ರೀನಿವಾಸ ಉಪಸ್ಥರಿತರಿದ್ದರು.

ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಪಂದ್ಯಕ್ಕೂ ಮುನ್ನ ಅಲ್ಪಾವಧಿ ಷರತ್ತು ಪೂರೈಸಬೇಕು: ಪರಮೇಶ್ವರ್



ಬೆಂಗಳೂರು,ಜ.18-

ಮಾರ್ಚ್‌ನಲ್ಲಿ ಐಪಿಎಲ್ ಬರುತ್ತದೆ. ಅಷ್ಟರಲ್ಲಿ ಅಲ್ಪಾವಧಿ ಷರತ್ತು ಪೂರೈಸಬೇಕು. ಅದಕ್ಕೆ ಚಿನ್ನಸ್ವಾಮಿ ಮೈದಾನದಲ್ಲಿ ಪಂದ್ಯಗಳ ಆಯೋಜನೆಗೆ ಷರತ್ತು ಬದ್ಧ ಅನುಮತಿ ಕೊಟ್ಟಿದ್ದೇವೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಸ್ಪಷ್ಟಪಡಿಸಿದರು.

ಚಿನ್ನಸ್ವಾಮಿ ಮೈದಾನದಲ್ಲಿ ಕ್ರಿಕೆಟ್ ಪಂದ್ಯ ಆಯೋಜನೆಗೆ ಗೃಹ ಇಲಾಖೆ ಅನುಮತಿ ನೀಡಿದ ಕುರಿತು ಮಾಧ್ಯಮಗಳಿಗೆ ಸದಾಶಿವನಗರ ನಿವಾಸದ ಬಳಿ ಗೃಹ ಸಚಿವರು ಇಂದು ಪ್ರತಿಕ್ರಿಯೆ ನೀಡಿದರು.

ನ್ಯಾ. ಡಿ. ಕುನ್ಹಾ ವಿಚಾರಣಾ ಸಮಿತಿ ರಚಿಸಿ ಸ್ಟೇಡಿಯಂ ಪರಿಶೀಲನೆಗೆ ಹೇಳಿದ್ದೆವು. ಅವರು ಹಲವು ಶಿಫಾರಸ್ಸು ಗಳನ್ನು ಕೊಟ್ಟಿದ್ದರು. ಇದರ ಅನ್ವಯ ಕ್ಯಾಬಿನೆಟ್‌ನಲ್ಲಿ ಚರ್ಚಿಸಿ, ಅಧಿಕಾರಿಗಳ ಸಮಿತಿ ರಚನೆ ಮಾಡಿದ್ದೆವು. ನಾವು ಡಿ ಕುನ್ಹಾ ಅವರ ಶಿಫಾರಸ್ಸು ಗಳನ್ನು ಕೆಎಸ್‌ಸಿಎಗೆ ಕಳಿಸಿ ಇದನ್ನು ಸರಿ ಮಾಡಿ ಎಂದಿರುವುದಾಗಿ ಹೇಳಿದರು.

ಇದರ ಸ್ಥಿತಿಗತಿ ಅಧ್ಯಯನಕ್ಕೆ ಮಹೇಶ್ವರ್ ರಾವ್ ಸಮಿತಿ ಮಾಡಿದ್ದೆವು. ಅವರು ವರದಿ ಕೊಟ್ಟಿದ್ದರು. ಕೆಎಸ್‌ಸಿಎ ಹೊಸ ಸಮಿತಿಯು ನಾವು ಷರತ್ತು ಪೂರೈಸುವುದಾಗಿ ಭರವಸೆ ನೀಡಿದ್ದರು. ಕ್ಯಾಬಿನೆಟ್‌ನಲ್ಲಿ ಚರ್ಚೆ ಮಾಡಿ ದೀರ್ಘಾವಧಿ ಹಾಗೂ ಅಲ್ಪಾವಧಿಯಲ್ಲಿ ಷರತ್ತು ಪೂರೈಸುವುದಾಗಿ ಬರವಣಿಗೆಯಲ್ಲಿ ಕೊಟ್ಟಿದ್ದಾರೆ. ಅದನ್ನು ಮರುಪರಿಶೀಲನೆ ಮಾಡುತ್ತೇವೆ. ನಾವು ಅವರ ಮೇಲೆ ವಿಶ್ವಾಸ ಇಟ್ಟಿದ್ದೇವೆ. ಈಗಾಗಲೇ ಕೆಲಸ ಶುರುವಾಗಿದೆ. ಚಿನ್ನಸ್ವಾಮಿ ಮೈದಾನದ ಗೇಟ್ ಕಿತ್ತಾಕಿ ಕೆಲಸ ಮಾಡುತ್ತಿದ್ದಾರೆ, ದಾರಿಯಲ್ಲಿ ಬರುವಾಗ ನೋಡಿದ್ದೇನೆ ಎಂದು ಸಚಿವರು ತಿಳಿಸಿದರು.

ರಾಜೀವ್ ಗೌಡ ಬಂಧನ ಆಗದ ವಿಚಾರವಾಗಿ ಪ್ರತಿಕ್ರಿಯಿಸಿ, ನಾವು ತಂಡ ರಚಿಸಿದ್ದು ಪತ್ತೆಗೆ ಸೂಚನೆ ನೀಡಿದ್ದೇವೆ. ಸಿಎಂ ಕೂಡ ನಿನ್ನೆ ಹೇಳಿದ್ದಾರೆ ಎಂದು ಉತ್ತರಿಸಿದರು.

ರಾಜ್ಯದಲ್ಲಿ ಡ್ರಗ್ಸ್ ಹೆಚ್ಚಾಗಿರುವ ಬಗ್ಗೆ ಸಿಎಂ ಎಚ್ಚರಿಕೆ ವಿಚಾರವಾಗಿ ಮಾತನಾಡಿ, ಸಿಎಂ ಎಚ್ಚರಿಕೆಯಿಂದ ಇರಬೇಕು ಎಂದು ಸೂಚನೆ ನೀಡಿದ್ದಾರೆ. ಅದು ಒಳ್ಳೆಯದು. ಸಿಎಂ ಕಡೆಯಿಂದ ಬಂದಾಗ ಹೆಚ್ಚು ಪರಿಣಾಮಕಾರಿಯಾಗಿರುತ್ತದೆ. ಎಲ್ಲಾ ವಿಚಾರವಾಗಿ ಸಮ್ಮೇಳನದಲ್ಲಿ ಚರ್ಚೆ ಮಾಡಿದ್ದೇವೆ. ನಾನು ಕಠಿಣವಾಗೇ ಹೇಳಿದ್ದೇನೆ. ರಾಜ್ಯದ ಪೊಲೀಸರು ಎಲ್ಲ ಪೊಲೀಸರಿಗಿಂತ ಚೆನ್ನಾಗಿ ಕೆಲಸ ಮಾಡ್ತಿದ್ದಾರೆ. ಹಾಗಂತ ಸಮಾಧಾನವಾಗಿ ಇರಲು ಆಗಲ್ಲ ಎಂದರು.

ಕಳೆದ ವರ್ಷ ಜೂನ್ 4ರಂದು ಆರ್‌ಸಿಬಿ ತಂಡ ಕಪ್ ಗೆದ್ದ ಹಿನ್ನೆಲೆಯಲ್ಲಿ ಸಂಭ್ರಮಾಚರಣೆ ಆಯೋಜಿಸಿದ್ದ ವೇಳೆ ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಕಾಲ್ತುಳಿತ ಉಂಟಾಗಿ 11 ಮಂದಿ ಸಾವನ್ನಪ್ಪಿ, 50 ಕ್ಕಿಂತ ಹೆಚ್ಚು ಮಂದಿ ಗಾಯಗೊಂಡಿದ್ದರು. ಆ ಬಳಿಕ ಚಿನ್ನಸ್ವಾಮಿಯಲ್ಲಿ ಕ್ರಿಕೆಟ್ ಪಂದ್ಯಗಳಿಗೆ ನಿಷೇಧ ಹೇರಲಾಗಿತ್ತು. ಇದೀಗ ಗೃಹ ಇಲಾಖೆಯು ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಪಂದ್ಯಗಳ ಆಯೋಜನೆಗೆ ಷರತ್ತುಬದ್ಧ ಅನುಮತಿ ನೀಡಿದೆ. ಇದು ಕ್ರಿಕೆಟ್ ಅಭಿಮಾನಿಗಳಿಗೆ ಗುಡ್ ನ್ಯೂಸ್.

ವೇಮನರ ಸಾಹಿತ್ಯ ಅರ್ಥಪೂರ್ಣ ಬದುಕಿಗೆ ದಾರಿದೀಪ: ಮಹಾಂತ ಬಸವಲಿಂಗ ಸ್ವಾಮೀಜಿ



ಬಾಗಲಕೋಟೆ,ಜ.18-

ಸಮೀಪದ ಬೆನಕಟ್ಟಿಯಲ್ಲಿ ಶುಕ್ರವಾರ ಹೇಮ ವೇಮನ ಸದ್ಬೋಧನ ಪೀಠ ಸ್ಥಳೀಯ ಹೇಮರಡ್ಡಿ ಮಲ್ಲಮ್ಮ ಪ್ರೌಢಶಾಲೆಯ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಿದ್ದ ವೇಮನರ ವಚನ ಕಂಠಪಾಠ ಹಾಗೂ ವಚನ ಗಾಯನ ಸ್ಪರ್ಧೆಯ ಬಹುಮಾನ ವಿತರಣಾ ಸಮಾರಂಭದಲ್ಲಿ ಆಶೀರ್ವಚನ ನೀಡಿದ ಸ್ವಾಮೀಜಿ, ವೇಮನ ಸಾಹಿತ್ಯ ಅರ್ಥಪೂರ್ಣ ಬದುಕಿಗೆ ದಾರಿದೀಪವಾಗಿದೆ ಎಂದರು.

ವಿದ್ಯಾರ್ಥಿಗಳು ಸಾಧನೆಯ ಕನಸು ಕಾಣಬೇಕು. ಅದನ್ನು ನನಸು ಮಾಡಿಕೊಳ್ಳುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ, ನಿರಂತರ ಶ್ರಮ ವಹಿಸಬೇಕು. ಸಂಸ್ಕಾರವಂತರಾಗಿ ಬದುಕುವ ಪರಿಯನ್ನು ಕಲಿಯಬೇಕು ಎಂದ ಬಸವಲಿಂಗ ಸ್ವಾಮೀಜಿ

, ನಮ್ಮನ್ನು ಹೆತ್ತವರು, ನಮಗೆ ಅಕ್ಷರ ಕಲಿಸಿ ಜ್ಞಾನಿಯನ್ನಾಗಿ ಮಾಡಿದ ಶಿಕ್ಷಕರು ಹಾಗೂ ನಮ್ಮ ಬದುಕಿಗೆ ಆಧ್ಯಾತ್ಮದ ಬೆಳಕನ್ನು ನೀಡಿರುವ ಮಹಾಯೋಗಿ ವೇಮನರಂತಹ ಜ್ಞಾನಿಗಳು, ಶರಣರು, ಮಹಾತ್ಮರು ನಮ್ಮ ನಮ್ಮ ಪಾಲಿನ ಹಿರೋಗಳು ಎಂಬುದನ್ನು ತಿಳಿಯಬೇಕು ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿದ್ದ ನಿವೃತ್ತ ಶಿಕ್ಷಣಾಧಿಕಾರಿ ಎಚ್.ಜಿ.ಮಿರ್ಜಿ ಮಾತನಾಡಿ, ಮಹಾಯೋಗಿ ವೇಮನರ ಉತ್ಕೃಷ್ಟ ವಚನಗಳನ್ನು ತಿಳಿದು ನಡೆದರೆ ಜೀವನದಲ್ಲಿ ಖಂಡಿತವಾಗಿಯೂ ಬದಲಾವಣೆಯಾಗುತ್ತದೆ. ಮನುಷ್ಯನ ಬದುಕಿನ ದಾರಿ ಹೇಗಿರಬೇಕು, ಹೇಗಿದ್ದರೆ ಬದುಕು ಸುಂದರ ಎಂಬುದನ್ನು ಅವರು ತಮ್ಮ ವಚನಗಳ ಮೂಲಕ ಮನುಕುಲಕ್ಕೆ ಸಂದೇಶ ನೀಡಿದ್ದಾರೆ ಎಂದರು.

ಅತಿಥಿಗಳಾಗಿದ್ದ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾ ಅಧ್ಯಕ್ಷ ಗದಿಗೆಪ್ಪ ಅರಕೇರಿ ಹಾಗೂ ನಿವೃತ್ತ ಶಿಕ್ಷಕ ಕೆ.ಪಿ.ಅರಿಷಿಣಗೋಡಿ ಮಾತನಾಡಿದರು. ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ಸಮಿತಿ ಅಧ್ಯಕ್ಷ ಪಂಡಿತ ಮಾಚಾ ಅಧ್ಯಕ್ಷತೆ ವಹಿಸಿದ್ದರು. ಹೇಮ ವೇಮನ ಸದ್ಬೋಧನ ಪೀಠದ ಕಾರ್ಯದರ್ಶಿ ಟಿ.ಎಚ್.ಸನ್ನಪ್ಪನವರ, ನಿವೃತ್ತ ಶಿಕ್ಷಕ ಜಿ.ಜಿ.ಚಿತ್ತರಗಿ, ನೀಲಪ್ಪ ಬಾಳಕ್ಕನವರ, ವಿಶ್ವಭಾರತಿ ಶಿಕ್ಷಣ ಸಮಿತಿಯ ಕಾರ್ಯದರ್ಶಿ ಹನಮಂತ ಮಾದರ ಅತಿಥಿಗಳಾಗಿದ್ದರು.

ಕಾರ್ಯಕ್ರಮದಲ್ಲಿ ವೇಮನರ ವಚನ ಕಂಠಪಾಠ ಹಾಗೂ ವಚನ ಗಾಯನ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನೀಲಪ್ಪ ಬಾಳಕ್ಕನವರ, ವೆಂಕಟೇಶ ತಿಮ್ಮಾಪೂರ ಹಾಗೂ ಟಿ.ಎಚ್.ಸನ್ನಪ್ಪನವರ ನಗದು ಬಹುಮಾನ ನೀಡಿದರು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಎಚ್.ಬಿ.ಗೋಣಿ ಸ್ವಾಗತಿಸಿದರು. ಎಸ್.ಬಿ.ಮುದಕಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ಎಂ.ಕಾಮಾ ನಿರೂಪಿಸಿದರು.

ಮಹಿಳಾ ಶಿಕ್ಷಣಕ್ಕೆ ಫುಲೆ ಕೊಡುಗೆ ಅಪಾರ: ಲತಾ ಮಲ್ಲಿಕಾರ್ಜುನ



ಬಳ್ಳಾರಿ,ಜ.18-

ನಗರದ ತೆಗ್ಗಿನಮಠ ಸಭಾಂಗಣದಲ್ಲಿ ಸಾವಿತ್ರಿಬಾಯಿ ಫುಲೆ ಶಿಕ್ಷಕಿಯರ ಸಂಘ, ತಾಲ್ಲೂಕು ಸರ್ಕಾರಿ ನೌಕರರ ಸಂಘದ ಸಹಯೋಗದಲ್ಲಿ ಶನಿವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ಸಾವಿತ್ರಿಬಾಯಿ ಫುಲೆ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಹೋರಾಟದ ಮೂಲಕ ಎಲ್ಲ ಸಮಸ್ಯೆ ಎದುರಿಸಿದ ಸಾವಿತ್ರಿಬಾಯಿ ಫುಲೆ ಅವರು ಮಹಿಳೆಯರಿಗೆ ಸ್ಫೂರ್ತಿಯಾಗಿದ್ದಾರೆ. ಅಂತಹ ಮಹನೀಯರ ಹೆಸರಿನಲ್ಲಿ ಸಂಘ ಕಟ್ಟುವುದು ಮುಖ್ಯವಲ್ಲ, ಅವರ ಹೆಸರಿಗೆ ಚ್ಯುತಿ ಬಾರದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿ. ಸಂಘಟನೆ ನೆಪದಲ್ಲಿ ಕೆಲವು ಶಿಕ್ಷಕರು ಪಾಠ ಮಾಡುವುದಕ್ಕಿಂದ ಹೆಚ್ಚು ರಾಜಕಾರಣದಲ್ಲಿ ತಲ್ಲೀನರಾಗಿದ್ದಾರೆ' ಎಂದರು.

ಸಾನ್ನಿಧ್ಯ ವಹಿಸಿದ್ದ ತೆಗ್ಗಿನಮಠದ ವರಸದ್ಯೋಜಾತ ಸ್ವಾಮೀಜಿ, ಸಂಘದ ರಾಷ್ಟ್ರೀಯ ಘಟಕದ ಅಧ್ಯಕ್ಷೆ ಲತಾ ಮಳ್ಳೂರು, ಜಿಲ್ಲಾ ಘಟಕದ ಅಧ್ಯಕ್ಷೆ ಟಿ.ಎಚ್.ಎಂ. ಲತಾ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಸ್.ಜಿ. ಮನೋಹರ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ದಿವಾಕರ ನಾರಾಯಣ ಮಾತನಾಡಿದರು.

12 ಶಿಕ್ಷಕಿಯರಿಗೆ ಸಾವಿತ್ರಿಬಾಯಿ ಫುಲೆ ಉತ್ತಮ ಶಿಕ್ಷಕಿ' ಜಿಲ್ಲಾಮಟ್ಟದ ಪ್ರಶಸ್ತಿ ಹಾಗೂ 42 ಶಿಕ್ಷಕಿಯರಿಗೆ ತಾಲ್ಲೂಕು ಮಟ್ಟದ ಪ್ರಶಸ್ತಿಗೆ ಪ್ರದಾನ ಮಾಡಲಾಯಿತು.


ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಗುರುಮೂರ್ತಿ, ಸಂಗಯ್ಯ ಇದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ನಿಮ್ಮೂರು ಸುದ್ದಿ

ಸಂಪಾದಕೀಯ

ಪ್ರಾದೇಶಿಕ ಪಕ್ಷಗಳನ್ನು ನುಂಗುವ ಬಿಜೆಪಿ ತಂತ್ರ ಅರಿಯಲು ಜೆಡಿಎಸ್‌ಗೆ ಸಕಾಲ!



ಬಿಜೆಪಿಯ ಕೇಂದ್ರ ತನಿಖಾ ಸಂಸ್ಥೆಗಳ ದಾಳಿಯ ಭೀತಿಗೂ, ಅಧಿಕಾರದ ಆಸೆಗೂ ಬಿಜೆಪಿ ಜೊತೆಗೂಡಿದ ಶಿಂಧೆ ಮತ್ತು ಅಜಿತ್ ಅವರ ಪಕ್ಷಗಳು ಅಧಃಪತನವನ್ನು ಎದುರಿಸುತ್ತಿವೆ. ಇದು, ಬಿಜೆಪಿಯಂತಹ ರಾಷ್ಟ್ರೀಯ ಪಕ್ಷದೊಂದಿಗಿನ ಮೈತ್ರಿಯಲ್ಲಿ ಪ್ರಾದೇಶಿಕ ಪಕ್ಷಗಳು ದೀರ್ಘಕಾಲದಲ್ಲಿ ದುರ್ಬಲಗೊಳ್ಳುವ ಅಪಾಯವನ್ನು ಎತ್ತಿ ತೋರಿಸಿದೆ.

ಮಹಾರಾಷ್ಟ್ರದ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಮುಗಿದಿವೆ. ಫಲಿತಾಂಶ ಪ್ರಕಟವಾಗಿದೆ. ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದ್ದರೆ, ಅದರ ಮಿತ್ರ ಪಕ್ಷಗಳಾದ ಶಿವಸೇನಾ(ಶಿಂದೆ) ಮತ್ತು ಎನ್‌ಸಿಪಿ(ಅಜಿತ್) ನಗಣ್ಯವಾಗಿ ಉಳಿದಿವೆ. ಸ್ಥಳೀಯ ಚುನಾವಣೆಗಳಲ್ಲಿ ಬಿಜೆಪಿಯ ಗೆಲುವು ಮತ್ತು ಪ್ರಾದೇಶಿಕ ಪಕ್ಷಗಳ ದುರ್ಬಲ ಪ್ರದರ್ಶನವು ನೆಲಮಟ್ಟದಲ್ಲಿಯೂ ಬಿಜೆಪಿ ಹೆಚ್ಚು ಬೇರೂರುತ್ತಿದೆ. ಹೆಬ್ಬಾವಿನ ರೀತಿಯಲ್ಲಿ ತನ್ನದೇ ಮಿತ್ರಪಕ್ಷಗಳನ್ನು ನುಂಗುತ್ತಿದೆ ಎಂಬುದಕ್ಕೆ ಕನ್ನಡಿ ಹಿಡಿದಿದೆ.

ಭಾರತದ ವಾಣಿಜ್ಯ ರಾಜಧಾನಿ ಮುಂಬೈ ಸೇರಿದಂತೆ 29 ನಗರ ಪಾಲಿಕೆಗಳ ಫಲಿತಾಂಶ ಜನವರಿ 16ರಂದು ಪ್ರಕಟವಾಗಿದೆ. ಒಟ್ಟು 2,869 ಸ್ಥಾನಗಳಲ್ಲಿ 1,786 ಸ್ಥಾನಗಳನ್ನು ಬಿಜೆಪಿ ನೇತೃತ್ವದ ಮಹಾಯುತಿ ಮೈತ್ರಿಕೂಟ ಗೆದ್ದಿದೆ. ಅದರಲ್ಲೂ ಬಿಜೆಪಿಯೇ 1,438 ಸ್ಥಾನಗಳನ್ನು ಗೆದ್ದುಕೊಂಡಿದ್ದರೆ, ಶಿವಸೇನಾ(ಶಿಂದೆ) 405 ಹಾಗೂ ಎನ್‌ಸಿಪಿ(ಅಜಿತ್) 165 ಸ್ಥಾನಗಳನ್ನು ಮಾತ್ರವೇ ಗೆದ್ದಿವೆ. ಅಂತೆಯೇ, 2025ರ ಡಿಸೆಂಬರ್‌ನಲ್ಲಿ ನಡೆದ ಒಟ್ಟು 288 ಪುರಸಭೆ ಮತ್ತು ನಗರ ಪಂಚಾಯಿತಿ ಚುನಾವಣೆಗಳಲ್ಲಿ ಮಹಾಯುತಿಯು 207 ಸಂಸ್ಥೆಗಳಲ್ಲಿ ಗೆಲುವು ಸಾಧಿಸಿತು. ಅದರಲ್ಲೂ, ಬಿಜೆಪಿಯೇ ಏಕಾಂಗಿಯಾಗಿ ಸುಮಾರು 117-129 ಸಂಸ್ಥೆಗಳಲ್ಲಿ ಆಡಳಿತ ರಚಿಸುವಂತೆ ಸ್ಥಾನಗಳನ್ನು ಗೆದ್ದಿದೆ.

ಈ ಫಲಿತಾಂಶವು ಬಿಜೆಪಿ ಪ್ರಾದೇಶಿಕ ಪಕ್ಷಗಳನ್ನು ಹಂತ-ಹಂತವಾಗಿ ಸರ್ವನಾಶ ಮಾಡುತ್ತದೆ ಎಂಬುದನ್ನು ಸ್ಪಷ್ಟವಾಗಿ ತೋರಿಸಿದೆ. ಬಿಜೆಪಿಯ ಮಿತ್ರಪಕ್ಷಗಳಿಗೆ ಗಂಭೀರ ಎಚ್ಚರಿಕೆ ರವಾನಿಸಿದೆ. ಮಹಾರಾಷ್ಟ್ರದಲ್ಲಿ 2024ರ ವಿಧಾನಸಭಾ ಚುನಾವಣೆಯಲ್ಲಿಯೇ ಬಿಜೆಪಿಯ ಮಿತ್ರಪಕ್ಷಗಳಿಗೆ ಈ ಎಚ್ಚರಿಕೆ ದೊರೆತಿತ್ತು. ಆ ಚುನಾವಣೆಯಲ್ಲಿ ಒಟ್ಟು 288 ಸ್ಥಾನಗಳಲ್ಲಿ ಮಹಾಯುತಿ 235 ಸ್ಥಾನಗಳನ್ನು ಗೆದ್ದರೂ, ಬಿಜೆಪಿಯೇ 132 ಕ್ಷೇತ್ರಗಳನ್ನು ಗೆದ್ದಿತ್ತು. ಶಿವಸೇನೆ(ಶಿಂದೆ) 57, ಎನ್‌ಸಿಪಿ(ಅಜಿತ್) 41 ಸ್ಥಾನಗಳನ್ನು ಮಾತ್ರವೇ ಗೆದ್ದಿದ್ದವು. ಆ ಸಂದರ್ಭದಲ್ಲಿಯೇ ಬಿಜೆಪಿ ತಮ್ಮನ್ನು ಮುಗಿಸುತ್ತಿದೆ ಎಂಬುದು ಎರಡೂ ಪಕ್ಷಗಳಿಗೂ ಅರ್ಥವಾಗಬೇಕಿತ್ತು. ಆದರೆ, ಅಧಿಕಾರದ ಲಾಲಸೆಯಿಂದ ಭವಿಷ್ಯವನ್ನು ಕಡೆಗಣಿಸಿದವು.

ಬಿಜೆಪಿ ಏಕಾಂಗಿಯಾಗಿ ಬಹುಮತಕ್ಕೆ ಅಗತ್ಯವಿರುವಷ್ಟು ಸ್ಥಾನಗಳನ್ನು ಗೆದ್ದಿರುವ ಸ್ಥಳೀಯ ಸಂಸ್ಥೆಗಳಲ್ಲಿ, ಬಿಜೆಪಿಗೆ ಮಿತ್ರಪಕ್ಷಗಳ ಹಂಗುಬೇಕಿಲ್ಲ. ಅವರ ಅಭಿಪ್ರಾಯಕ್ಕೆ ಪ್ರಾಯಶಃ ಮನ್ನಣೆಯೂ ದೊರೆಯುವುದಿಲ್ಲ. ಬಿಎಂಸಿಯಲ್ಲಿ ಬಿಜೆಪಿ ಅತೀ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಇದು, ಠಾಕ್ರೆ ಕುಟುಂಬದ ಬಲವನ್ನು ಕುಗ್ಗಿಸಿದೆ. ಶಿವಸೇನೆಯ ಸಾಂಪ್ರದಾಯಿಕ ಭದ್ರಕೋಟೆಗಳಾಗಿದ್ದ ಮುಂಬೈ, ಥಾಣೆ, ಕಲ್ಯಾಣ್-ಡೊಂಬಿವಲಿ ಮುಂತಾದೆಡೆ ಶಿಂದೆ ಪಕ್ಷವನ್ನು ಬಿಜೆಪಿ ಮುಗಿಸಿದೆ. ಅಂತೆಯೇ, ಪುಣೆ, ಪಿಂಪ್ರಿ-ಚಿಂಚವಡ್‌ಗಳಲ್ಲಿ ಪವಾರ್ ಕುಟುಂಬದ ಪ್ರಾಬಲ್ಯವನ್ನು ಒಡೆದುಹಾಕಿ, ಅಜಿತ್ ಪಕ್ಷವನ್ನು ಹಿಮ್ಮೆಟ್ಟಿ ಬಿಜೆಪಿ ಪ್ರಾಬಲ್ಯ ಸಾಧಿಸಿದೆ. ಪ್ರಾದೇಶಿಕ ಪಕ್ಷಗಳು ಬಿಜೆಪಿ ಇಲ್ಲದೆ, ತಮ್ಮ ಅಸ್ತಿತ್ವವಿಲ್ಲ ಎಂಬ ಪರಿಸ್ಥಿತಿ ಎದುರಿಸುತ್ತಿವೆ. ತಮ್ಮ ಸ್ವತಂತ್ರ ಗುರುತು ಕಳೆದುಕೊಳ್ಳುವ ಸ್ಥಿತಿಗೆ ಬಂದಿದೆ.

ಬಿಜೆಪಿಯ ಕೇಂದ್ರ ತನಿಖಾ ಸಂಸ್ಥೆಗಳ ದಾಳಿಯ ಭೀತಿಗೂ, ಅಧಿಕಾರದ ಆಸೆಗೂ ಬಿಜೆಪಿ ಜೊತೆಗೂಡಿದ ಶಿಂಧೆ ಮತ್ತು ಅಜಿತ್ ಅವರ ಪಕ್ಷಗಳು ಅಧಃಪತನವನ್ನು ಎದುರಿಸುತ್ತಿವೆ. ಇದು, ಬಿಜೆಪಿಯಂತಹ ರಾಷ್ಟ್ರೀಯ ಪಕ್ಷದೊಂದಿಗಿನ ಮೈತ್ರಿಯಲ್ಲಿ ಪ್ರಾದೇಶಿಕ ಪಕ್ಷಗಳು ದೀರ್ಘಕಾಲದಲ್ಲಿ ದುರ್ಬಲಗೊಳ್ಳುವ ಅಪಾಯವನ್ನು ಎತ್ತಿ ತೋರಿಸಿದೆ. ಬಹುಶಃ, ಇನ್ನೆರಡು ಚುನಾವಣೆಗಳ ವೇಳೆಗೆ, ಶಿಂದೆ ಮತ್ತು ಅಜಿತ್ ಪಕ್ಷಗಳ ಮತಬ್ಯಾಂಕ್‌ಅನ್ನು ಬಿಜೆಪಿ ತನ್ನದಾಗಿಸಿಕೊಳ್ಳಬಹುದು. ಆ ಎರಡೂ ಪಕ್ಷಗಳು ಹಾಗೂ ವಿಪಕ್ಷಗಳಲ್ಲಿರುವ ಎನ್‌ಸಿಪಿ (ಶರದ್ ಬಣ) ಕೂಡ ನಿರ್ನಾಮವಾಗಿಬಿಡಬಹುದು.

ನೆರೆಯ ಮಹಾರಾಷ್ಟ್ರದಲ್ಲಿ ಪ್ರಾದೇಶಿಕ ಪಕ್ಷಗಳ ದುಸ್ಥಿತಿ ಕರ್ನಾಟಕದಲ್ಲಿ ಜೆಡಿಎಸ್‌ಗೂ ಒದಗಿಬರಬಹುದು. ಈಗಾಗಲೇ, ಅಪ್ಪ-ಮಕ್ಕಳ ಪಕ್ಷವೆಂದು ಹಣೆಪಟ್ಟಿ ಕಟ್ಟಿಕೊಂಡಿರುವ ಜೆಡಿಎಸ್, ಸದ್ಯಕ್ಕೆ ಕುಟುಂಬ ಪಕ್ಷವಾಗಿ ಮಾತ್ರವೇ ಉಳಿದಿದೆ ಎಂಬಂತೆ ಭಾಸವಾಗುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಬಿಜೆಪಿ ಜೊತೆಗೆ ಮೈತ್ರಿ ಮಾಡಿಕೊಂಡು, ಅಸ್ತಿತ್ವದ ಹುಡುಕಾಟದಲ್ಲಿದೆ.

ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ಸ್ವತಂತ್ರವಾಗಿ ಸ್ಪರ್ಧಿಸಿ 19 ಸ್ಥಾನಗಳನ್ನು ಗೆದ್ದಿದ್ದ ಜೆಡಿಎಸ್, 2024ರ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಜೊತೆ ಕೈಜೋಡಿಸಿತು. ಆ ಚುನಾವಣೆಯಲ್ಲಿ 28 ಕ್ಷೇತ್ರಗಳ ಪೈಕಿ, ಬಿಜೆಪಿ ಜೊತೆ ಗುದ್ದಾಡಿ 3 ಕ್ಷೇತ್ರಗಳಲ್ಲಿ ಕಣಕ್ಕಿಳಿದ ಜೆಡಿಎಸ್, ಗೆದ್ದಿದ್ದು ಒಂದೇ ಕ್ಷೇತ್ರದಲ್ಲಿ. ಜೆಡಿಎಸ್‌ನ ಭದ್ರಕೋಟೆಯೆಂದೇ ಪರಿಗಣಿಸಲಾದ ಹಳೇ ಮೈಸೂರು ಭಾಗದಲ್ಲಿಯೂ ಪಕ್ಷ ಹೀನಾಯ ಪ್ರದರ್ಶನ ಕಂಡಿತು. ತೀವ್ರ ಕುಸಿತ ಎದುರಿಸಿತು. 2026ರಲ್ಲಿ ರಾಜ್ಯದ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ನಡೆಯುವ ಸಾಧ್ಯತೆಗಳಿವೆ. ಒಂದು ವೇಳೆ, ಸ್ಥಳೀಯ ಚುನಾವಣೆಗಳಲ್ಲಿ ಬಿಜೆಪಿ ಜೊತೆ ಮೈತ್ರಿ ಮುಂದುವರೆದರೆ, ಜೆಡಿಎಸ್ ತನ್ನ ಅಂತ್ಯಕ್ಕೆ ತಾನೇ ಮತ್ತೊಂದು ಇಟ್ಟಿಗೆ ಇಟ್ಟಂತಾಗಲಿದೆ. ಅದರಲ್ಲೂ, ಮೈತ್ರಿಯಲ್ಲಿ ಜೆಡಿಎಸ್ ಹೆಚ್ಚು ಸ್ಥಾನಗಳಲ್ಲಿ ಸ್ಪರ್ಧಿಸದಿದ್ದರೆ ಅಥವಾ ಗೆಲ್ಲದಿದ್ದರೆ, ಅಲ್ಲಿಗೆ ತನ್ನ ಶವಪೆಟ್ಟಿಗೆಗೆ ತಾನೇ ಅಂತಿಮ ಮೊಳೆಯನ್ನೂ ಜಡಿದುಕೊಳ್ಳಲಿದೆ ಎಂಬ ಅಭಿಪ್ರಾಯಗಳಿವೆ.

ಜೆಡಿಎಸ್ ಎಚ್ಚೆತ್ತುಕೊಳ್ಳಲು ಮಹಾರಾಷ್ಟ್ರ ಮಾತ್ರವೇ ಉದಾಹರಣೆಯಾಗಿಲ್ಲ. ಅದಕ್ಕೂ ಮುನ್ನವೇ, ಹಲವು ರಾಜ್ಯಗಳಲ್ಲಿ ಪ್ರಾದೇಶಿಕ ಪಕ್ಷಗಳಿಗೆ ಬಿಜೆಪಿ ಖೆಡ್ಡ ತೋಡಿರುವ ಹಲವು ಉದಾಹರಣೆಗಳಿವೆ. ಪಂಜಾಬ್‌ನಲ್ಲಿ ಶಿರೋಮಣಿ ಅಕಾಲಿ ದಳ () ದೀರ್ಘಕಾಲ ಬಿಜೆಪಿಯೊಂದಿಗೆ ಮೈತ್ರಿಯಲ್ಲಿತ್ತು. ಈ ಮೈತ್ರಿಯಲ್ಲಿ ಎಸ್‌ಎಡಿ ಬಳಸಿಕೊಂಡು ಬಿಜೆಪಿ ನೆಲೆ ಕಂಡರೆ, ಎಸ್‌ಎಡಿ ಕುಸಿಯಲಾರಂಭಿಸಿತು. ಸಿಖ್ ಮತದಾರರನ್ನು ಕಳೆದುಕೊಂಡಿತು. 2020ರಲ್ಲಿ ರೈತ ಪ್ರತಿಭಟನೆಗಳ ಕಾರಣಕ್ಕಾಗಿ ಬಿಜೆಪಿ ಜೊತೆಗಿನ ದೋಸ್ತಿ ತೊರೆದ ಎಸ್‌ಎಡಿ, ಈಗಲೂ ತನ್ನ ಅಸ್ತಿತ್ವದ ಹುಡುಕಾಟದಲ್ಲಿಯೇ ಇದೆ. ನಿರಂತರ ಹಿನ್ನಡೆ ಅನುಭವಿಸುತ್ತಿದೆ.

ಬಿಹಾರದಲ್ಲಿಯೂ ನಿತೀಶ್ ಕುಮಾರ್ ಅವರ ಜೆಡಿಯು ಮುಂದಿಟ್ಟುಕೊಂಡು ನೆಲೆ ಕಂಡ ಬಿಜೆಪಿ, ಈಗ ಜೆಡಿಯುವನ್ನೇ ಹಿಂದಿಕ್ಕಿದೆ. ನಿತೀಶ್ ಕಾರಣಕ್ಕಾಗಿ ಇನ್ನೂ ನೆಲೆ ಉಳಿಸಿಕೊಂಡಿರುವ ಜೆಡಿಯು, ನಿಧಾನವಾಗಿ ಕುಸಿತ ಕಾಣುತ್ತಿದೆ. ಜೆಡಿಯು ಕಳೆದುಕೊಳ್ಳುತ್ತಿರುವ ನೆಲೆಯನ್ನು ಅದರ ಮಿತ್ರ ಪಕ್ಷವೇ ಆದ ಬಿಜೆಪಿ ಅತಿಕ್ರಮಿಸುತ್ತಿದೆ. ಒಡಿಶಾದಲ್ಲಿ ಬಿಜು ಜನತಾ ದಳ (ಬಿಜೆಡಿ) ಜೊತೆಗಿನ ಮೈತ್ರಿಯಲ್ಲಿ ನೆಲೆ ಕಂಡ ಬಿಜೆಪಿ, ಈಗ ಬಿಜೆಡಿಯನ್ನೇ ಮಣಿಸಿ, ಅಧಿಕಾರದಲ್ಲಿ ಪ್ರತಿಷ್ಠಾಪನೆಗೊಂಡಿದೆ. ಆಂಧ್ರ, ಅಸ್ಸಾಂ, ತಮಿಳುನಾಡು ಸೇರಿದಂತೆ ಹಲವು ರಾಜ್ಯಗಳಲ್ಲಿಯೂ ಇದೇ ತಂತ್ರವನ್ನು ಬಿಜೆಪಿ ಪಾಲಿಸುತ್ತಿದೆ.


ಇದು, ರಾಷ್ಟ್ರೀಯ ಪಕ್ಷದೊಂದಿಗಿನ ಮೈತ್ರಿಯಲ್ಲಿ ಪ್ರಾದೇಶಿಕ ಪಕ್ಷಗಳು ದೀರ್ಘಕಾಲದಲ್ಲಿ ತಮ್ಮ ಸ್ವತಂತ್ರ ಗುರುತು ಮತ್ತು ಬಲವನ್ನು ಕಳೆದುಕೊಳ್ಳುವ ಅಪಾಯ ಇದೆ ಎಂಬುದನ್ನು ತೋರುತ್ತದೆ. ದೇಶಾದ್ಯಂತ ಪ್ರಾದೇಶಿಕ ಪಕ್ಷಗಳನ್ನು ತುಳಿದು ಮೇಲೇರುತ್ತಿರುವ ಬಿಜೆಪಿಯ ತಂತ್ರ-ಕುತಂತ್ರಗಳು ಜೆಡಿಎಸ್‌ಗೆ ಈಗಾಗಲೇ ಅರ್ಥವಾಗಬೇಕಿತ್ತು. ಆದರೆ, ತಕ್ಷಣಕ್ಕೆ ಮೈತ್ರಿಯ ಲಾಭ ಪಡೆದುಕೊಳ್ಳುವ ಧಾವಂತದಲ್ಲಿರುವ ಎಚ್.ಡಿ ಕುಮಾರಸ್ವಾಮಿ ಅವರು ಭವಿಷ್ಯವನ್ನು ಕಡೆಗಣಿಸಿದ್ದಾರೆ. ಅಧಿಕಾರಕ್ಕಾಗಿ ಯಾವುದೇ ಹಂತಕ್ಕೆ ಬೇಕಿದ್ದರೂ ಹೋಗುವ ದೇವೇಗೌಡರು ಮತ್ತು ಅವರ ಮಕ್ಕಳು, ತಮ್ಮ ಸ್ವ-ಹಿತಾಸಕ್ತಿಗಾಗಿ ಪಕ್ಷವನ್ನು ಬಲಿಕೊಡುತ್ತಿದ್ದಾರೆ.

ಜೆಡಿಎಸ್‌ನ ನೆಲೆಯಾಗಿರುವ ಹಳೇ ಮೈಸೂರು ಭಾಗದ ಒಕ್ಕಲಿಗರನ್ನು ತಲುಪಲು ಜೆಡಿಎಸ್‌ಅನ್ನು ಬಿಜೆಪಿ ದಾಳವಾಗಿ ಬಳಸಿಕೊಳ್ಳುತ್ತಿದೆ. ಉರಿಗೌಡ-ನಂಜೇಗೌಡರೆಂಬ ಸುಳ್ಳು-ಪೊಳ್ಳು ಕತೆಗಳು, ಹಿಂದುತ್ವದ ಹಿಕಮತ್ತಿನೊಂದಿಗೆ ಒಕ್ಕಲಿಗರನ್ನು ಬಿಜೆಪಿ ಈಗಾಗಲೇ ಸೆಳೆಯುತ್ತಿದೆ. ಜೊತೆಗೆ, ಬಿಜೆಪಿಯ ಸಂಘಟನಾ ಬಲ, ಕೇಂದ್ರದ ಅಧಿಕಾರ, ಮೋದಿ-ಶಾ ಮೇಲಿನ ಹುಚ್ಚು ಆಕರ್ಷಣೆಗಳು ಬಿಜೆಪಿಯ ವಿಸ್ತರಣೆಗೆ ಅನುಕೂಲ ಮಾಡಿಕೊಡುತ್ತಿವೆ.

ಇದನ್ನು ಜೆಡಿಎಸ್‌ನ ನಾಯಕರು ಮತ್ತು ಕಾರ್ಯಕರ್ತರು ಅರ್ಥ ಮಾಡಿಕೊಳ್ಳದಿದ್ದರೆ, ಜೆಡಿಎಸ್ ತಕ್ಷಣ ಎಚ್ಚೆತ್ತುಕೊಳ್ಳದಿದ್ದರೆ, ಸ್ಥಳೀಯ ಮಟ್ಟದಲ್ಲಿ ಬಲವಾದ ನಾಯಕತ್ವ ಮತ್ತು ಸಂಘಟನೆಯನ್ನು ಬೆಳೆಸದಿದ್ದರೆ, ಮಹಾರಾಷ್ಟ್ರದಂತೆ ಶಿಂದೆ ಸೇನೆ ಅಥವಾ ಅಜಿತ್ ಎನ್‌ಸಿಪಿಯಂತಹ ಸ್ಥಿತಿ ಜೆಡಿಎಸ್‌ಗೂ ಎದುರಾಗಬಹುದು. ಈಗಲೂ ಕಾಲ ಮಿಂಚಿಲ್ಲ, ಜೆಡಿಎಸ್ ಎಚ್ಚೆತ್ತುಕೊಳ್ಳಲು ಅವಕಾಶಗಳಿವೆ. ಸ್ಥಳೀಯ ಕಾರ್ಯಕರ್ತರಿಗೆ ಅವಕಾಶ ನೀಡುವುದು, ಪಕ್ಷದ ಹುದ್ದೆಗಳಲ್ಲಿ ಸ್ಥಳೀಯ ಮುಖಂಡರಿಗೆ ಮನ್ನಣೆ ನೀಡುವುದರ ಜೊತೆಗೆ, ಪಕ್ಷವು ತನ್ನ ಭವಿಷ್ಯವನ್ನು ಮರುನಿರ್ಮಾಣ ಮಾಡಿಕೊಳ್ಳಬಹುದು. ಆಗ ಮಾತ್ರ ಜೆಡಿಎಸ್‌ನ ದೀರ್ಘಕಾಲೀನ ರಾಜಕೀಯ ಬದುಕು ಸಾಧ್ಯ.

ಹೆಸರು ಬೇಟಿ ಬಚಾವ್ರೋ - ರಕ್ಷಣೆ ಅತ್ಯಾಚಾರಿಗೆ - ಇದೇ ಮೋದಿ ಭಾರತ

'ಬೇಟಿ ಬಚಾವ್ರೋ' ಎಂದು ಗಂಟಲು ಹರಿಯುವಂತೆ ಕೂಗುವ ಈ ಬಿಜೆಪಿಗರು ತಮ್ಮದೇ ಪಕ್ಷದವರು ಅಕ್ರಮಗಳನ್ನು ಎಸಗಿದಾಗ ಏನೂ ಮಾತಾಡದೇ ಸುಮ್ಮನಾಗುತ್ತಾರೆ. ಆರೋಪಿಗಳನ್ನ ರಕ್ಷಿಸುವ ನಿಟ್ಟನತ್ತ ಗಮನಹರಿಸುತ್ತಾರೆ. ತಮ್ಮದೇ ಪಕ್ಷದ ಮಂತ್ರಿಗಳು, ಶಾಸಕರು, ಸಂಸದರು ಅಪರಾಧಿ ಸ್ಥಾನದಲ್ಲಿ ನಿಂತಾಗ ಸುಮ್ಮನಿರುವ ಇವರುಗಳು ಮೋದಿ ಆಡಳಿತದಲ್ಲಿ ಏನು ಮಾಡಿದ್ದಾರೆ?



ವಿಶ್ವಗುರುವೆಂದು ಜಗದಗಲ ಕರೆಸಿಕೊಳ್ಳುವ ಪ್ರಧಾನಿ ಮೋದಿ ಅವರ ದೇಶದಲ್ಲಿಯೇ ಮಹಿಳೆಯರಿಗೆ ರಕ್ಷಣೆ ಇಲ್ಲದಂತಾಗಿದೆ. ದೇಶದಲ್ಲಿ ಪ್ರತಿ 50 ನಿಮಿಷಕ್ಕೊಮ್ಮೆ ಮಹಿಳೆಯರ ಮೇಲೆ ಅತ್ಯಾಚಾರ ಅಥವಾ ಲೈಂಗಿಕ ಕಿರುಕುಳ ಕೃತ್ಯಗಳು ನಡೆಯುತ್ತಿವೆ. ದೇಶದ ರಕ್ಷಣೆ ಮಾಡುತ್ತೇವೆಂದು ಅಧಿಕಾರದ ಚುಕ್ಕಾಣಿ ಹಿಡಿದ ಬಿಜೆಪಿಯೇ ಅತ್ಯಾಚಾರಿಗಳನ್ನ ಸಾಕುತ್ತಿದೆ. ಅತ್ಯಾಚಾರಿಗಳನ್ನು ಉನ್ನತ ಸ್ಥಾನದಲ್ಲಿಟ್ಟು ಮೆರೆಸುತ್ತಿದೆ.

ಇದೇ ಹಾದಿಯಲ್ಲಿ ಉತ್ತರಪ್ರದೇಶದ ಶಹಜಹಾನ್ಪುರದ ಸಂಸದ, ಕೇಂದ್ರದ ಮಾಜಿ ಸಚಿವ ಸ್ವಾಮಿ ಚಿನ್ಮಯಾನಂದನ ಕೃತ್ಯವೂ ಇದೆ. ಈತ 2011ರಲ್ಲಿ ತನ್ನ ಶಿಕ್ಷಣ ಸಂಸ್ಥೆಯ ಹಾಸ್ಟೆಲ್‌ನಲ್ಲಿ ವಾಸವಿದ್ದ ಕಾನೂನು ಪದವಿ ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ಎಸಗಿದ ಆರೋಪ ಹೊತ್ತಿದ್ದ. ಆದರೂ, ಆತನಿಗೆ ಬಿಜೆಪಿ ಟಿಕೆಟ್ ಕೊಟ್ಟಿತ್ತು. ಗೆಲ್ಲಿಸಿತ್ತು. ಮಂತ್ರಿಗಿರಿಯನ್ನೂ ನೀಡಿತ್ತು.

ಹಾಸ್ಟೆಲ್‌ನ ಬಾತ್‌ರೂಮಿನಲ್ಲಿ ಸ್ನಾನ ಮಾಡುತ್ತಿರುವಾಗ ವಿಡಿಯೋ ಚಿತ್ರಿಸಿ ಅದನ್ನಿಟ್ಟುಕೊಂಡು ಒಂದುವರೆ ವರ್ಷಗಳ ಕಾಲ ಅತ್ಯಾಚಾರ ನಡೆಸಿದ ಆರೋಪ ಬಿಜೆಪಿ ಮಾಜಿ ಸಚಿವನ ಮೇಲಿತ್ತು. ಆತನ ವಿರುದ್ಧ ದೂರು ದಾಖಲಾಗಿತ್ತು.

ಹೌದು, ಸ್ವಾಮಿ ಚಿನ್ಮಯಾನಂದ ಅಧೀನದಲ್ಲಿರುವ ಶಹಜಹಾನ್ಪುರದ ಸ್ವಾಮಿ ಶುಕ್ ದೇವಾನಂದ ಸ್ನಾತಕೋತ್ತರ ಕಾನೂನು ಕಾಲೇಜಿನಲ್ಲಿ 23 ವರ್ಷದ ಯುವತಿ ವಿದ್ಯಾಭ್ಯಾಸ ಮಾಡುತ್ತಿದ್ದಳು. ಅದೇ ಕಾಲೇಜಿನ ಹಾಸ್ಟೆಲ್‌ವೊಂದರಲ್ಲಿ ವಾಸವಿದ್ದ ಯುವತಿ ಬಾತ್ ರೂಮ್‌ನಲ್ಲಿ ಸ್ನಾನ ಮಾಡುತ್ತಿರುವ ದೃಶ್ಯಗಳನ್ನು ಚಿತ್ರಿಕರಿಸಲಾಗಿದೆ ಎಂದು ಆರೋಪಿಸಲಾಗಿದೆ. ಈ ವಿಡಿಯೋಗಳನ್ನ ಮುಂದಿಟ್ಟುಕೊಂಡು ಸತತ ಒಂದೂವರೆ ವರ್ಷಗಳಿಗೂ ಹೆಚ್ಚು ಕಾಲ ಯುವತಿ ಮೇಲೆ ಬಿಜೆಪಿಯ ಮಾಜಿ ಸಚಿವ ಅತ್ಯಾಚಾರ ಎಸಗಿದ್ದಾನೆ ಎಂದು ಆರೋಪಿಸಲಾಗಿತ್ತು. ಜತೆಗೆ, ಯುವತಿಯ ಮನೆಯವರಿಗೆ ಈತ ಬೆದರಿಕೆ ಹಾಕಿದ್ದನು ಎಂದು ಹೇಳಲಾಗಿದೆ.

ಸತತ ಹಿಂಸೆಯಿಂದ ಬೇಸತ್ತಿದ್ದ ಯುವತಿ ಸಾಮಾಜಿಕ ಮಾಧ್ಯಮದಲ್ಲಿ ವಿಡಿಯೋ ಕ್ಲಿಪ್ ಅಪಲೋಡ್ ಮಾಡಿ ತನ್ನ ಅಳಲನ್ನು ತೋಡಿಕೊಂಡಿದ್ದಳು. ಆಕೆಯ ಕಾಲೇಜಿನ ನಿರ್ದೇಶಕ ಚಿನ್ಮಯಾನಂದ್ ತನ್ನನ್ನು ಮತ್ತು ತನ್ನ ಕುಟುಂಬವನ್ನು ಕೊಲ್ಲುವುದಾಗಿ ಬೆದರಿಕೆ ಹಾಕುತ್ತಿದ್ದಾರೆ ಎಂದು ಆರೋಪಿಸಿದ್ದಳು.

ಮುಂದುವರೆದು ಮಾತನಾಡಿದ್ದ ಯುವತಿ, ''ಈ ಬಿಜೆಪಿ ನಾಯಕ ಹಲವಾರು ಹುಡುಗಿಯರ ಜೀವನ ಹಾಳು ಮಾಡಿದ್ದಾನೆ'' ಎಂದು ಆರೋಪಿಸಿದ್ದಳು. ಜತೆಗೆ, ಪ್ರಧಾನಿ ನರೇಂದ್ರ ಮೋದಿ ಮತ್ತು ಯುಪಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಸಹಾಯ ಕೂಡ ಕೇಳಿದ್ದಳು. ಆದರೆ, ಈ ಯುವತಿಯ ಅಳಲು ಮೋದಿಗಾಗಲಿ, ಯೋಗಿಗಾಗಲಿ ಕೇಳಿಸಲಿಲ್ಲ.

''ಹಲವು ಹುಡುಗಿಯರ ಜೀವನವನ್ನು ಹಾಳು ಮಾಡಿದ ಈತ ಸಮಾಜದಲ್ಲಿ ಉನ್ನತ ಸ್ಥಾನದಲ್ಲಿರುವ ನಾಯಕ. ನನಗೆ ಈತ ಜೀವ ಬೆದರಿಕೆ ಹಾಕುತ್ತಿದ್ದಾನೆ. ನನ್ನ ಬಳಿ ಅವನ ವಿರುದ್ಧ ಎಲ್ಲ ದಾಖಲೆಗಳಿವೆ. ದಯವಿಟ್ಟು ನನಗೆ ಸಹಾಯ ಮಾಡುವಂತೆ ನಾನು ಮೋದಿಜೀ ಮತ್ತು ಯೋಗಿಜೀ ಅವರನ್ನು ವಿನಂತಿಸುತ್ತೇನೆ. ಅವನು ನನ್ನ ಕುಟುಂಬವನ್ನು ಕೊಲ್ಲುವುದಾಗಿಯೂ ಬೆದರಿಕೆ ಹಾಕಿದ್ದಾನೆ'' ಎಂದು ಅವರು ವೀಡಿಯೊದಲ್ಲಿ ಹೇಳಿದ್ದರು.

ವಿಡಿಯೋ ಅಪಲೋಡ್ ಮಾಡಿದ ಬಳಿಕ ಯುವತಿ ನಾಪತ್ತೆಯಾಗಿದ್ದಳು. ಬರೋಬ್ಬರಿ ಆರು ದಿನಗಳ ನಂತರ ಅವಳನ್ನು ರಾಜಸ್ಥಾನದಲ್ಲಿ ಪತ್ತೆ ಹಚ್ಚಲಾಗಿತ್ತು. ಮೂರು ಬಾರಿ ಸಂಸದರಾಗಿರುವ ಚಿನ್ಮಯಾನಂದ್ ವಿರುದ್ಧ ದೂರು ನೀಡಿದ್ದಕ್ಕಾಗಿ ಸ್ಥಳೀಯ ಜಿಲ್ಲಾ ಮ್ಯಾಜಿಸ್ಟ್ರೇಟ್ ತನ್ನ ಪೋಷಕರಿಗೆ ಬೆದರಿಕೆ ಹಾಕಲು ಪ್ರಯತ್ನಿಸುತ್ತಿದ್ದಾರೆ ಎಂದು ಸಂತ್ರಸ್ತ ಯುವತಿ ಆರೋಪಿಸಿದ್ದರು. ಈ ಘಟನೆಯ ದೃಷ್ಟಿಯಿಂದ ಆಕೆ ಮತ್ತು ಆಕೆಯ ಕುಟುಂಬಕ್ಕೆ ಪೊಲೀಸರು ರಕ್ಷಣೆಯನ್ನೂ ಒದಗಿಸಿದ್ದರು.

ಉತ್ತರ ಪ್ರದೇಶ ಶಹಜಹಾನ್ಪುರದಲ್ಲಿ ಎಫ್ ಐ ಆರ್ ದಾಖಲಿಸಲು ನಿರಾಕರಿಸಿದ ಕಾರಣ ಯುವತಿ ದೆಹಲಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲು ನಿರ್ಧರಿಸಿದ್ದರು. ಆಕೆಯ ದೂರಿನ ಮೇರೆಗೆ, ನವೆಂಬರ್ 2011ರಲ್ಲಿ ನಗರ ಕೊಟ್ವಾಲಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆ ಬಳಿಕ ಸುಪ್ರೀಂ ಕೋರ್ಟ್ ಸ್ವಯಂಪ್ರೇರಿತವಾಗಿ ಈ ಪ್ರಕರಣವನ್ನು ವಿಚಾರಣೆಗೆ ತೆಗೆದುಕೊಂಡಿತು. ಈ ಪ್ರಕರಣದ ತನಿಖೆಗೆ ವಿಶೇಷ ತನಿಖಾ ತಂಡವನ್ನು ರಚನೆ ಮಾಡಿ ಆದೇಶಿಸಿತು.

ಎಸ್ ಐ ಟಿಗೆ ಸಂತ್ರಸ್ತೆಯ ಸಹೋದರ ಪೆನ್ ಡ್ರೈವ್ ಅನ್ನು ಹಸ್ತಾಂತರಿಸಿದ್ದರು. ಎಸ್‌ಐಟಿ ನ್ಯಾಯಯುತ ತನಿಖೆ ನಡೆಸಿದರೆ, ಸತ್ಯ ಹೊರಬರಲಿದೆ. ಈ ಪೆನ್ ಡ್ರೈವ್‌ನಲ್ಲಿ ಚಿನ್ಮಯಾನಂದ್ ವಿರುದ್ಧ ಕೆಲವು ಪ್ರಮುಖ ಪುರಾವೆಗಳಿವೆ ಎಂದು ಸಂತ್ರಸ್ತೆ ಮತ್ತು ಆಕೆಯ ಸಹೋದರ ಹೇಳಿಕೊಂಡಿದ್ದರು.

ಚಿನ್ಮಯಾನಂದ ಅವರು ಮಲಗುವ ಕೋಣೆಗೆ ಯುವತಿಯ ಸಮ್ಮುಖದಲ್ಲಿ ತೆರಳಿದ ಎಸ್‌ಐಟಿ ತಂಡ ಹಲವಾರು ಸಾಕ್ಷ್ಯಗಳನ್ನು ಸಂಗ್ರಹಿಸಿತ್ತು. ವಿದ್ಯಾರ್ಥಿನಿಯ ಮೇಲೆ ಅತ್ಯಾಚಾರ ಆರೋಪ ಹೊತ್ತಿರುವ ಚಿನ್ಮಯಾನಂದ್ ಅವರನ್ನು 2019ರ ಸೆಪ್ಟೆಂಬರ್ 13 ರಿಂದ ಗೃಹಬಂಧನದಲ್ಲಿ ಇರಿಸಲಾಗಿತ್ತು. ಬಳಿಕ, 2019ರ ಸೆಪ್ಟೆಂಬರ್ 20ರಂದು ಎಸ್‌ಐಟಿ ಬಂಧಿಸಿತು. ಆತನನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿತು. ಆಗ, ಆತ ಕೇಂದ್ರ ಗೃಹ ಖಾತೆ ರಾಜ್ಯ ಸಚಿವನಾಗಿದ್ದರು. ಪ್ರಕರಣದ ತನಿಖೆಯನ್ನು ಪೂರ್ಣಗೊಳಿಸಿದ ನಂತರ, ವಿಶೇಷ ತನಿಖಾ ತಂಡ 4,700 ಪುಟಗಳ ಆರೋಪಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ತನಿಖೆಯ ಸಂದರ್ಭದಲ್ಲಿ ಎಸ್ ಐ ಟಿ 105 ಮಂದಿಯ ಹೇಳಿಕೆಗಳು ಮತ್ತು 55 ದಾಖಲಾತಿಗಳನ್ನು ಸಂಗ್ರಹಿಸಿದೆ. ಹಾಗೆಯೇ, ಆರು ಸಾಕ್ಷಿಗಳನ್ನು ಪ್ರಾಸಿಕ್ಯೂಷನ್ ಹಾಜರುಪಡಿಸಿದೆ.

ಇನ್ನು ಚಿನ್ಮಯಾನಂದ ಯುವತಿಯಿದ್ದ ಹಾಸ್ಟೆಲ್ ರೂಮಿನಿಂದ ಕೆಲ ಸಾಕ್ಷ್ಯಾಧಾರಗಳನ್ನು ನಾಶ ಮಾಡಿದ್ದಾರೆ ಎಂದೂ ಆತನ ವಿರುದ್ಧ 376ಬಿ ಅಡಿ ಪ್ರಕರಣ ದಾಖಲಿಸಬೇಕು ಎಂದು ಯುವತಿಯ ಪೋಷಕರು ಆಗ್ರಹಿಸಿದ್ದರು. ಈ ಪ್ರಕರಣದಲ್ಲಿ ದೂರು ನೀಡಿದ್ದ ಯುವತಿಯನ್ನು ಸಹ ಪೊಲೀಸರು ಬಂಧನ ಮಾಡಿದ್ದರು. 2019ರಲ್ಲಿ ಅಲಹಾಬಾದ್ ಹೈಕೋರ್ಟ್ ಆಕೆಗೆ ಜಾಮೀನು ನೀಡಿತ್ತು. ಯುವತಿಗೆ ಜಾಮೀನು ನೀಡಿದ 2 ತಿಂಗಳಲ್ಲೇ ಆರೋಪಿಗೂ ಕೂಡ ಜಾಮೀನು ಸಿಕ್ಕಿತ್ತು.

ಚಿನ್ಮಯಾನಂದ್ ವಿರುದ್ಧ ಅತ್ಯಾಚಾರ ಆರೋಪದಡಿ ಪ್ರಕರಣ ದಾಖಲಿಸದಿದ್ದಕ್ಕಾಗಿ 23 ವರ್ಷದ ಎಲ್ ಎಲ್ ಎಂ ವಿದ್ಯಾರ್ಥಿನಿ ಎಸ್‌ಐಟಿ ಬಗ್ಗೆ ನಿರಾಶೆ ವ್ಯಕ್ತಪಡಿಸಿದ್ದರು.

ಅಷ್ಟೇ ಅಲ್ಲ, ಸಂತ್ರಸ್ತೆಯ ಪರವಾಗಿ ನಿಲ್ಲಬೇಕಾಗಿದ್ದ ಉತ್ತರಪ್ರದೇಶ ಸರ್ಕಾರ ಪ್ರಕರಣವನ್ನು ಹಿಂಪಡೆಯಬೇಕು ಎಂದು ಜಿಲ್ಲಾ ಮ್ಯಾಜಿಸ್ಟ್ರೇಟ್ ಮೂಲಕ ನ್ಯಾಯಾಲಯಕ್ಕೆ ಪತ್ರವನ್ನು ಕಳಿಸಿತ್ತು. ಆದರೆ, ಸಂತ್ರಸ್ತೆ ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿ, ಪ್ರಕರಣವನ್ನು ಹಿಂಪಡೆಯಲು ಬಯಸುವುದಿಲ್ಲ ಎಂದು ನ್ಯಾಯಾಲಯಕ್ಕೆ ಕೋರಿದ್ದರು.

ಇದಾದ ನಂತರ, 77 ವರ್ಷದ ಚಿನ್ಮಯಾನಂದ್ ಅವರು ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದರು. ಆದರೆ, ಪರಿಹಾರ ಪಡೆಯಲು ವಿಫಲರಾದರು.

ಚಿನ್ಮಯಾನಂದ್ ಅವರು ಡಿಸೆಂಬರ್ 19, 2022 ರಂದು ಅಲಹಾಬಾದ್ ಹೈಕೋರ್ಟ್‌ನಿಂದ ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ಪಡೆದರು.

2024ರಲ್ಲಿ ನಡೆದ ವಿಚಾರಣೆಯಲ್ಲಿ ಗೃಹ ಸಚಿವ ಸ್ವಾಮಿ ಚಿನ್ಮಯಾನಂದ ವಿರುದ್ಧ ದಾಖಲಾಗಿದ್ದ ಅತ್ಯಾಚಾರ ಪ್ರಕರಣದಲ್ಲಿ ಸಾಕ್ಷ್ಯಾಧಾರಗಳ ಕೊರತೆಯಿಂದಾಗಿ ಚಿನ್ಮಯಾನಂದ ಅವರನ್ನು ಜಿಲ್ಲಾ ನ್ಯಾಯಾಲಯ ಖುಲಾಸೆಗೊಳಿಸಿದೆ. ನ್ಯಾಯಾಲಯದ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶ ಎಹ್ಸಾನ್ ಹುಸೇನ್ ಅವರು ಈ ಪ್ರಕರಣದಿಂದ ಖುಲಾಸೆಗೊಳಿಸಿದ್ದರು.

ಚಿನ್ಮಯಾನಂದ ಅವರು ಉತ್ತರ ಪ್ರದೇಶದಿಂದ ಮೂರು ಬಾರಿ ಸಂಸದರಾಗಿದ್ದರು. ವಾಜಪೇಯಿ ಸರ್ಕಾರದಲ್ಲಿ ಕಿರಿಯ ಸಚಿವರಾಗಿದ್ದರು. 77ವರ್ಷದ ಚಿನ್ಮಯಾನಂದ ತಮ್ಮ ಅಧಿಕಾರ ಮತ್ತು ಪ್ರಭಾವವನ್ನು ದುರುಪಯೋಗಪಡಿಸಿಕೊಂಡು ವಿದ್ಯಾರ್ಥಿನಿಗೆ ಲೈಂಗಿಕ ಹಿಂಸೆ ನೀಡಿದ್ದರು. ಪ್ರಕರಣ ಬೆಳಕಿಗೆ ಬಂದ ನಂತರ, ಭಾರೀ ರಾಜಕೀಯ ಚರ್ಚೆ ಮತ್ತು ಸಾಮಾಜಿಕ ಆಕ್ರೋಶಕ್ಕೆ ಕಾರಣವಾಗಿತ್ತು. ಆದರೆ, ಈಗ ಅವರು ದೋಷದಿಂದ ಮುಕ್ತರಾಗಿದ್ದಾರೆ. ಸಂತ್ರಸ್ತೆಗೆ ನ್ಯಾಯ ಸಿಗದಂತಾಗಿದೆ.

ಬೇಟಿ ಬಚಾವ್ರೋ ಎಂದು ಗಂಟಲು ಹರಿಯುವಂತೆ ಕೂಗುವ ಈ ಬಿಜೆಪಿಗರು ತಮ್ಮದೇ ಪಕ್ಷದವರು ಅಕ್ರಮಗಳನ್ನು ಎಸಗಿದಾಗ ಏನೂ ಮಾತನಾಡದೇ ಸುಮ್ಮನಾಗುತ್ತಾರೆ. ಆರೋಪಿಗಳನ್ನು ರಕ್ಷಿಸುವ ನಿಟ್ಟನತ್ತ ಗಮನಹರಿಸುತ್ತಾರೆ. ತಮ್ಮದೇ ಪಕ್ಷದ ಮಂತ್ರಿಗಳು, ಶಾಸಕರು, ಸಂಸದರು ಅಪರಾಧಿ ಸ್ಥಾನದಲ್ಲಿ ನಿಂತಾಗ ಸುಮ್ಮನಿರುವ ಇವರುಗಳು ಮೋದಿ ಆಡಳಿತದಲ್ಲಿ ಏನು ಮಾಡಿದ್ದಾರೆ? ಎಂದು ಸಾಮಾನ್ಯ ಜನರು ಪ್ರಶ್ನೆ ಮಾಡಿದರೇ, ಅವರಿಗೆ ದೇಶದ್ರೋಹಿ ಇಲ್ಲವೇ ಹಿಂದುತ್ವ ವಿರೋಧಿ ಎಂಬ ಹಣೆಪಟ್ಟಿ ಕಟ್ಟಿ ಅರಚುತ್ತಾರೆ.

ಹೆಣ್ಣುಮಕ್ಕಳ ಪಾಲಿಗೆ ಅತ್ಯಾಚಾರವೆಂಬುದೇ ಭಯಾನಕ ನರಕ. ಅದಕ್ಕಿಂತ ಭೀಕರ ಅದನ್ನು ಬಹಿರಂಗಪಡಿಸಿ ಆರೋಪಿಗಳ ವಿರುದ್ಧ ಕಾನೂನು ಹೋರಾಟ ನಡೆಸುವುದು. ಮೋದಿ ಕಾಲದಲ್ಲಿರುವ ನಾವುಗಳು ಈ ಕುರುಡು, ಕಿವುಡು ಸರ್ಕಾರ ಮತ್ತು ಈ ಸಮಾಜವನ್ನು ಎದುರಿಸಲು ನಿಜಕ್ಕೂ ಗಟ್ಟಿ ಗುಂಡಿಗೆ ಬೇಕಾಗಿದೆ.

ಬಳ್ಳಾರಿ ಗಲಭೆ : ಸಿಬಿಐ ತನಿಖೆಗೆ ಆಗ್ರಹಿಸಿ ಕಾಂಗ್ರೆಸ್ ವಿರುದ್ಧ ರಣಕಹಳೆ ಮೊಳಗಿಸಿದ ಬಿಜೆಪಿ

ಬಳ್ಳಾರಿ,ಜ.18-

ನಗರದಲ್ಲಿ ಇತ್ತೀಚಿಗೆ ನಡೆದ ಬ್ಯಾನರ್ ಗಲಭೆ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವುದು ಹಾಗೂ ಶಾಸಕ ನಾರಾ ಭರತ್ ರೆಡ್ಡಿ ಮತ್ತವರ ಬೆಂಬಲಿಗರನ್ನು ಬಂಧಿಸಬೇಕೆಂದು ಒತ್ತಾಯಿಸಿ ಕಾಂಗ್ರೆಸ್ ವಿರುದ್ಧ ಬಿಜೆಪಿ ರಣಕಹಳೆ ಮೊಳಗಿಸಿದೆ.

ಇಲ್ಲಿನ ಎಪಿಎಂಸಿ ಮೈದಾನದಲ್ಲಿ ನಡೆದ ಬಿಜೆಪಿ ಪ್ರತಿಭಟನೆ ಮತ್ತು ಸಮಾವೇಶದಲ್ಲಿ ಬಳ್ಳಾರಿ ಹಾಗೂ ವಿಜಯನಗರ ಸೇರಿದಂತೆ ಮತ್ತಿತರ ಭಾಗಗಳಿಂದ ದೊಡ್ಡ ಸಂಖ್ಯೆಯಲ್ಲಿ ಆಗಮಿಸಿದ್ದ ಕಾರ್ಯಕರ್ತರು ಕಾಂಗ್ರೆಸ್ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿ ಆಕ್ರೋಶ ಹೊರಹಾಕಿದರು.

ಸಮಾವೇಶದಲ್ಲಿ ಮಾತನಾಡಿದ ಬಿಜೆಪಿಯ ನಾಯಕರು, ಕಾಂಗ್ರೆಸ್ ಹಾಗೂ ಶಾಸಕ ನಾರಾ ಭರತ್ ರೆಡ್ಡಿ ವಿರುದ್ಧ ಅಕ್ಷರಶಃ ಬೆಂಕಿ ಉಗುಳಿದರು. ಘಟನೆ ನಡೆದು 15 ದಿನಗಳು ಆದರೂ ಈವರೆಗೂ ಶಾಸಕ ನಾರಾಭರತ್ ರೆಡ್ಡಿ ಅವರ ಆಪ್ತ ಸತೀಶ್ ರೆಡ್ಡಿ ಮತ್ತು ಬೆಂಬಲಿಗರನ್ನು ಏಕೆ ಬಂಧಿಸಿಲ್ಲ?

ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ ಎಂದು ವಾಗ್ದಾಳಿ ನಡೆಸಿದರು.

ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ ಇದನ್ನು ಮುಚ್ಚಿ ಹಾಕುವ ದುರುದ್ದೇಶದಿಂದಲೇ ಸಿಐಡಿಗೆ ವಹಿಸಲಾಗಿದೆ. ಇದು ಸರಕಾರದ ಮೂಗಿನಡಿ ತನಿಖೆ ನಡೆಯುತ್ತಿರುವುದರಿಂದ ನಿಷ್ಪಕ್ಷಪಾತ ತನಿಖೆ ನಡೆಯಲು ಸಾಧ್ಯವೇ ಇಲ್ಲ ಎಂದು ಅನುಮಾನ ವ್ಯಕ್ತಪಡಿಸಿದರು.

ಅಂದು ಬೆಂಗಳೂರಿನಿಂದ ಬಳ್ಳಾರಿವರೆಗೆ ಪಾದಯಾತ್ರೆ ನಡೆಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಳ್ಳಾರಿಯನ್ನು ರಿಪಬ್ಲಿಕ್ ಆಫ್ ಬಳ್ಳಾರಿಯಿಂದ ಮುಕ್ತಗೊಳಿಸಿದ್ದೇವೆ ಎಂದು ಡಂಗುರ ಹೊಡೆಯುತ್ತಿದ್ದಾರೆ. ಈಗ ಇಲ್ಲಿ ನಡೆಯುತ್ತಿರುವುದಾದರೂ ಏನು? ಎಂದು ಪ್ರಶ್ನೆ ಮಾಡಿದರು.

ಶಾಸಕ ನಾರಾಭರತ್ ರೆಡ್ಡಿ ರಕ್ಷಣೆ ಮಾಡುವುದಕ್ಕಾಗಿಯೇ ಸರ್ಕಾರ ಅವರನ್ನು ಬಂಧಿಸುತ್ತಿಲ್ಲ. ಬಂಧಿಸಿದರೆ ಕಾಂಗ್ರೆಸ್ ಸರ್ಕಾರದ ಮರ್ಯಾದೆ ಹಾಳಾಗುತ್ತದೆ ಎಂದು ಸಿಐಡಿಗೆ ವಹಿಸಿ ತಿಪ್ಪೇ ಸಾರಿಸುವ ಕೆಲಸ ಮಾಡುತ್ತಿದೆ. ನಮಗೆ ನ್ಯಾಯ ಸಿಗುವವರೆಗೂ ಹೋರಾಟ ನಿಲ್ಲಿಸುವುದಿಲ್ಲ ಎಂದು ಶಪಥ ಮಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಕಾನೂನು ಮತ್ತು ಸಂಪೂರ್ಣವಾಗಿ ಕುಸಿದು ಬಿದ್ದಿದೆ. ಹುಬ್ಬಳ್ಳಿಯಲ್ಲಿ ಮಹಿಳೆಯ ಮೇಲೆ ಪೊಲೀಸರು ಹಲ್ಲೆ ನಡೆಸಿ ವಿವಸ್ತ್ರಗೊಳಿಸಿದ್ದಾರೆ, ಅಂಕೋಲದಲ್ಲಿ ದಲಿತ ಮಹಿಳೆಯನ್ನು ಮದುವೆಯಾಗಿದ್ದಕ್ಕೆ ಹಾಡುಹಗಲೇ ಕಗ್ಗೊಲೆಯಾಗಿದೆ. ನಮ ಪಕ್ಷದ ಶಾಸಕಿಯ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಅಶ್ಲೀಲವಾಗಿ ಕಾಮೆಂಟ್ ಮಾಡುತ್ತಾರೆ, ಸರ್ಕಾರ ಸೌಜನ್ಯಕ್ಕಾದರೂ ಅವರನ್ನು ಬಂಧಿಸಿಲ್ಲ ಎಂದು ಕಿಡಿಕಾರಿದರು.

ಪೊಲೀಸ್ ಠಾಣೆಗಳು ಇಂದು ಕಾಂಗ್ರೆಸ್ ಭವನಗಳಾಗಿ ಪರಿವರ್ತನೆಯಾಗಿವೆ ಹಿಂದುಗಳ ಮೇಲೆ ನಿರಂತರವಾಗಿ ದೌರ್ಜನ್ಯ ನಡೆಯುತ್ತಿದ್ದರೂ ಮತ ಬ್ಯಾಂಕ್ ಕೈ ಕೊಡಬಹುದೆಂಬ ಭೀತಿಯಿಂದ ಕ್ರಿಮಿನಲ್‌ಗಳನ್ನು ರಕ್ಷಣೆ ಮಾಡುವ ಕೆಲಸ ಮಾಡುತ್ತಿದೆ. ಮುಂದಿನ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸಬೇಕು ಎಂದು ಕರೆಕೊಟ್ಟರು.

ಬಳ್ಳಾರಿ ಇಂದು ರಿಪಬ್ಲಿಕ್ ಆಫ್ ಕಾಂಗ್ರೆಸ್ ಆಗಿದೆ. ನಮಲ್ಲಿನ ಕೆಲವು ಸಣ್ಣಪುಟ್ಟ ಭಿನ್ನಾಭಿಪ್ರಾಯಗಳಿಂದ ಅವರಲ್ಲಿ ಕೆಲವರು ಆಕಸಿಕವಾಗಿ ಶಾಸಕರಾಗಿದ್ದಾರೆ. ಆದರೆ ಅವರು ಹೋಗುತ್ತಿರುವ ದಾರಿ ನಡೆದುಕೊಳ್ಳುವ ರೀತಿನೀತಿಗಳು ಜನವಿರೋಧಿಯಾಗಿವೆ. ಇಂಥ ಶಾಸಕನನ್ನು ಮೊದಲು ಮನೆಗೆ ಕಳಿಸಿ ಎಂದು ಮುಖ್ಯಮಂತ್ರಿಯನ್ನು ಒತ್ತಾಯಿಸಿದರು.

ಸಿದ್ದರಾಮಯ್ಯನವರು ಕುರ್ಚಿಯಿಂದ ಇಳಿಯುವ ಮೊದಲು ನ್ಯಾಯಯುತ ತನಿಖೆ ನಡೆಸಿ ನಾರಾ ಭರತ ರೆಡ್ಡಿಯನ್ನು ತಕ್ಷಣ ಬಂಧಿಸಬೇಕು. ಆಗ ಮಾತ್ರ ನೀವು ಉತ್ತಮ ಮುಖ್ಯಮಂತ್ರಿಯಾಗಿ ನೆನಪಿಸಿಕೊಳ್ಳುತ್ತೀರಿ. ಇಲ್ಲದಿದ್ದರೆ, ನೀವು ಕಪ್ಪು ಚುಕ್ಕೆಯೊಂದಿಗೆ ಮನೆಗೆ ಹೋಗುತ್ತೀರಿ ಎಂದು ಬಿಜೆಪಿ ನಾಯಕರು ಎಚ್ಚರಿಸಿದರು.

ಕುರ್ಚಿಯಿಂದ ಇಳಿಯುವ ಮೊದಲು, ಕಪ್ಪು ಚುಕ್ಕೆ ಬಿಡದೆ, ನ್ಯಾಯಯುತ ತನಿಖೆ ನಡೆಸಿ ನರ ಭರತ ರೆಡ್ಡಿಯನ್ನು ತಕ್ಷಣ ಬಂಧಿಸಿ. ಆಗ ಮಾತ್ರ ನೀವು ಉತ್ತಮ ಮುಖ್ಯಮಂತ್ರಿಯಾಗಿ ನೆನಪಿಸಿಕೊಳ್ಳುತ್ತೀರಿ. ಇಲ್ಲದಿದ್ದರೆ ನೀವು ಕಪ್ಪು ಚುಕ್ಕೆಯೊಂದಿಗೆ ಮನೆಗೆ ಹೋಗುತ್ತೀರಿ ಎಂದು ಬಿಜೆಪಿ ನಾಯಕರು ಎಚ್ಚರಿಸಿದರು.

ಕಾಂಗ್ರೆಸ್ ತನ್ನನ್ನು ತಾನು ರಕ್ಷಿಸಿಕೊಳ್ಳಲು ಉದ್ದೇಶಪೂರ್ವಕವಾಗಿ ಸತ್ಯಗಳನ್ನು ತಿರುಚುತ್ತಿದೆ. ನಾರಾ ಭರತ್ ರೆಡ್ಡಿಗೆ ಸಂಬಂಧಿಸಿದ ಖಾಸಗಿ ಗನ್‌ಮ್ಯಾನ್ ಒಬ್ಬ ಕಾಂಗ್ರೆಸ್ ಕಾರ್ಯಕರ್ತನ ಮೇಲೆ ಗುಂಡು ಹಾರಿಸಿರುವುದನ್ನು ಮುಚ್ಚಲಾಗುತ್ತಿದೆ. ಈಗ ಜಗತ್ತಿಗೆ ನಿಖರವಾಗಿ ಏನಾಗಿದೆ ಎಂದು ತಿಳಿದಿದೆ. ಆದರೂ ಏಕೆ ಅವರನ್ನು ಬಂಧಿಸಲಾಗಿಲ್ಲ ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಅಪರಾಧಿಗಳನ್ನು ಮಾತ್ರ ಬೆಂಬಲಿಸುತ್ತದೆ. ಡಿ.ಕೆ ಶಿವಕುಮಾರ್ ಅವರಿಂದ ನಾವು ಏನನ್ನೂ ನಿರೀಕ್ಷಿಸಲು ಸಾಧ್ಯವಿಲ್ಲ. ಒಬ್ಬ ಆರೋಪಿಯು ಇಂತಹ ಕ್ರಿಮಿನಲ್ ಹಿನ್ನಲೆಯಲ್ಲಿ ಉಳ್ಳವರಿಗೆ ಬೆಂಬಲಿಸಲು ಸಾಧ್ಯ ಎಂದು ಬಿಜೆಪಿ ನಾಯಕರು ಟೀಕಾ ಪ್ರಹಾರ ನಡೆಸಿದರು.

ಸಮಾವೇಶದಲ್ಲಿ ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ, ಪ್ರತಿಪಕ್ಷದ ನಾಯಕ ಆರ್.ಅಶೋಕ್, ವಿಧಾನಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವರಾದ ಜನಾರ್ದನರೆಡ್ಡಿ, ಶ್ರೀರಾಮುಲು, ಸಂಸದ ಗೋವಿಂದ ಕಾರಜೋಳ, ರಾಜ್ಯ ಬಿಜೆಪಿ ಸಹ ಉಸ್ತುವಾರಿ ಸುಧಾಕರ್ ರೆಡ್ಡಿ, ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಯಿ, ಶಾಸಕರಾದ ಸುನೀಲ್‌ಕುಮಾರ್, ದೊಡ್ಡನಗೌಡ ಪಾಟೀಲ್ ಸೇರಿದಂತೆ ಪ್ರಮುಖರು ಭಾಗವಹಿಸಿದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR